MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 335 | ಬುಧವಾರ : 29-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 335 | WEDNESDAY : 29-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಂಘಸಂಸ್ಥೆ ಚಟುವಟಿಕೆ ನಿಬರ್ಂಧಕ್ಕೆ ತಡೆ

**ಬೆಂಗಳೂರು, ಅ. 28–** ಸಾರ್ವಜನಿಕ ಹಾಗೂ ಸರ್ಕಾರಿ ಸ್ಥಳಗಳಲ್ಲಿ ಸಂಘಸ್ಥಂಸ್ಥೆಗಳು ಯಾವುದೇ ಚಟುವಟಿಕೆಗಳನ್ನು ನಡೆಸಲು ಪೊಲೀಸ್ ಇಲಾಖೆಯ ಪೂರ್ವಾನುಮತಿ ಕಡ್ಡಾಯ ಎಂಬ ಸರ್ಕಾರದ ಆದೇಶಕ್ಕೆ ರಾಜ್ಯ ಹೈಕೋರ್ಟ್ ತಡೆ ನೀಡಿದ್ದು, ಸರ್ಕಾರಿ ಆದೇಶ 'ದ ಮೂಲಕ ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿಬರ್ಂಧ ಹೇರಲು ಮುಂದಾಗಿದ್ದ ಸರ್ಕಾರಕ್ಕೆ ಹಿನ್ನಡೆಯಾದಂತಾಗಿದೆ.



ಯಾವುದೇ ಸಂಘಸಂಸ್ಥೆಗಳು ಸರ್ಕಾರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಚಟುವಟಿಕೆ ನಡೆಸಲು ಹಾಗೂ 10ಕ್ಕಿಂತ ಹೆಚ್ಚು ಜನ ಸೇರಲು ಪೊಲೀಸ್ ಇಲಾಖೆಯ ಪೂರ್ವಾನುಮತಿ ಎಂದು ಅಗತ್ಯ ಇಲ್ಲದಿದ್ದರೆ ಅದನ್ನು ಕಾನೂನುಬಾಹಿರ ಅಕ್ರಮ ಕೂಟ ಎಂದು ಪರಿಗಣಿಸಲಾಗುತ್ತದೆ ಎಂಬ ಸರ್ಕಾರದ ಆದೇಶಕ್ಕೆ ರಾಜ್ಯ ಹೈಕೋರ್ಟ್ ತಡೆ ನೀಡಿದೆ.

ಸರ್ಕಾರ ಆದೇಶ ಪ್ರಶ್ನಿಸಿ, ಹುಬ್ಬಳ್ಳಿಯ ಪುನಶ್ಚೇತನ ಸೇವಾ ಸಂಸ್ಥೆ ಅಧ್ಯಕ್ಷ ವಿನಾಯಕ, ವಿ ಕೇರ್ ಫೌಂಡೇಶನ್ ಅಧ್ಯಕ್ಷ ಗಂಗಾಧರಯ್ಯ, ಧಾರಾವಾಡದ ರಾಜೀವ್ ಮಲ್ಹಾರ ಕುಲಕರ್ಣಿ, ಬೆಳಗಾವಿಯ ಉಮಾ ಸತ್ಯಜಿತ್ ಚವ್ಹಾಣ್ ಸಲ್ಲಿಸಿದ್ದ ರಿಟ್ ಅರ್ಜಿಯ ವಿಚಾರಣೆ ನಡೆಸಿದ ಧಾರಾವಾಡದ ಹೈಕೋರ್ಟ್‌ನ ವಿಭಾಗೀಯ ಪೀಠದ ಏಕಸದಸ್ಯ ಪೀಠದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ವಿಚಾರಣೆ ನಡೆಸಿ ಸರ್ಕಾರದ ಆದೇಶಕ್ಕೆ ತಡೆ ನೀಡಿದರು.

ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಸರ್ಕಾರಿ ಜಾಗಗಳಲ್ಲಿ ಆರ್‌ಎಸ್‌ಎಸ್‌ನ ಚಟುವಟಿಕಗಳಿಗೆ ಹಾಗೂ ಪಥ ಸಂಚಲನ ನಿಬರ್ಂಧಿಸಲು ಸರ್ಕಾರ ಸಂಘಸಂಸ್ಥೆಗಳಿಗೆ ಸರ್ಕಾರಿ ಜಾಗಗಳಲ್ಲಿ ಚಟುವಟಿಕೆಯನ್ನು ನಡೆಸುವುದನ್ನು ನಿಬರ್ಂಧಿಸಿ ಆದೇಶ ಹೊರಡಿಸಿತ್ತು. ಈ ಆದೇಶದಿಂದ ಆರ್‌ಎಸ್‌ಎಸ್‌ನ ಚಟುವಟಿಕೆಗಳು ಪಥಸಂಚಲನವನ್ನು ಸರ್ಕಾರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲು ಅನುಮತಿ ಕಡ್ಡಾಯವಾಗಿತ್ತು.

ನ್ಯಾಯಾಲಯದ ಈ ಆದೇಶದಿಂದ ಆರ್‌ಎಸ್‌ಎಸ್‌ನ ಚಟುವಟಿಕೆಗಳಿಗೆ ನಿಬರ್ಂಧ ಹೇರಲು ಮುಂದಾಗಿದ್ದ ಸರ್ಕಾರಕ್ಕೆ ಹಿನ್ನೆಡೆಯಾಗಿದೆ.(2ನೇಪುಟಕ್ಕೆ)

## ರಾಯಚೂರು ಮಹಾನಗರ ಪಾಲಿಕೆಯ ಸಾಮಾನ್ಯ ಮಹಾಸಭೆ ಪಾಲಿಕೆಯ ಮಳಿಗೆಗಳು ಪಾರದರ್ಶಕವಾಗಿ ನಿರ್ವಹಣೆಯಾಗಲಿ: ನರಸಮ್ಮ ಮಾಡಗಿರಿ ಸೂಚನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಅ.28–** ರಾಯಚೂರು ಮಹಾನಗರ ಪಾಲಿಕೆಯ ಅಧೀನದಲ್ಲಿನ ಎಲ್ಲಾ ಮಳಿಗೆಗಳು ಉತ್ತಮ ನಿರ್ವಹಣೆ ಆಗಬೇಕು. ಬಾಡಿಗೆ ದರ, ಒಪ್ಪಂದ ಸೇರಿದಂತೆ ಯಾವುದೇ ವಿಷಯಗಳ ಬಗ್ಗೆ ದೂರುಗಳು ಬಾರದ ಹಾಗೆ ಎಚ್ಚರಿಕೆ ವಹಿಸಬೇಕು. ಪಾರದರ್ಶಕತೆಗೆ ಒತ್ತು ಕೊಡಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷೆ ನರಸಮ್ಮ ನರಸಿಂಹಲು ಮಾಡಗಿರಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಅ.28ರಂದು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಪಾಲಿಕೆಯ ವ್ಯಾಪ್ತಿಯ ಮಳಿಗೆಗಳಿಗೆ ಈ ಹಿಂದೆ ನಿಗದಿಪಡಿಸಿದ ಬಾಡಿಗೆ ದರವನ್ನು ಪರಿಷ್ಕರಿಸಲು ಪರಿಶೀಲಿಸಬಹುದಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ ಅವರು ವಿಷಯ ಪ್ರಸ್ತಾಪಿಸಿದರು. ಮಳಿಗೆಗಳನ್ನು ಬಾಡಿಗೆ ಪಡೆದವರೇ ಬೇರೆ; ಅಲ್ಲಿ ವ್ಯಾಪಾರ ಮಾಡುವವರೇ ಬೇರೆಯಾಗಿರುತ್ತಾರೆ. ಈ ಬಗ್ಗೆ ಸಹ ಪರಿಶೀಲಿಸಬೇಕು. ಬಾಡಿಗೆ ಪಡೆದಾಗ ನೀಡುವ ಒಪ್ಪಂದ ಪತ್ರ ಹಾಗೂ ಅಲ್ಲಿ ವ್ಯಾಪಾರಕ್ಕಾಗಿ ನೀಡುವ ವ್ಯಾಪಾರ ಪರವಾನಿಗೆಯನ್ನು ಪರಿಶೀಲಿಸಬೇಕು ಎಂದು ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ್ ಹಾಗೂ ಪಾಲಿಕೆಯ ಸದಸ್ಯರಾದ ಬಸವರಾಜ ಅವರು ಧನಿಗೂಡಿಸಿದರು.

**ತನಿಖೆಗೆ ಒತ್ತಾಯ:** ಮಳಿಗೆಗಳನ್ನು ಬಾಡಿಗೆ ಪಡೆದವರು ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ. ಕಟ್ಟಡದ ವರ್ಗಾವಣೆಯನ್ನೂ ಪಾಲಿಕೆಯ ಅಧಿಕಾರಿಗಳೇ ಈ ಹಿಂದೆ ಮಾಡಿರುವುದರ ಬಗ್ಗೆ ತನಿಖೆಯಾಗಬೇಕು ಎಂದು ಪಾಲಿಕೆಯ ಸದಸ್ಯ ಎನ್.ಶ್ರೀನಿವಾಸ ಅವರು ಇದೆ ವೇಳೆ ಒತ್ತಾಯಿಸಿದರು.

ಮಹಾನಗರ ಪಾಲಿಕೆಯ ಮಳಿಗೆಗಳಿಗೆ ಈ ಹಿಂದೆ ಎಷ್ಟು ಬಾಡಿಗೆ ದರ ನಿಗಧಿಪಡಿಸಲಾಗಿತ್ತು. ಈ ಮಧ್ಯೆ ಬಾಡಿಗೆ ದರ ಹೆಚ್ಚಳ ಮಾಡಲಾಗಿದೆಯೋ ಅಥವಾ ಇಲ್ಲವೋ? ಮಳಿಗೆಯನ್ನು ಬಾಡಿಗೆ ಪಡೆದವರು ಹೆಚ್ಚಿನ ಬೆಲೆಗೆ ಬೇರೆಯವರೆಗೆ ಬಾಡಿಗೆ ನೀಡುತ್ತಿದ್ದಾರೆ ಎನ್ನುವ ಸಂದೇಹದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಬೇಕು. ಬಾಡಿಗೆ ದರ ಹೆಚ್ಚಳ ಅಗತ್ಯವಿದೆ ಎಂಬುದರ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮವಹಿಸಬೇಕು ಎಂದು ಅಧ್ಯಕ್ಷರು ಸೂಚನೆ ನೀಡಿದರು.

ಸುಗಮ ಸಂಚಾರಕ್ಕಾಗಿ ನಗರದಲ್ಲಿನ ಎಲ್ಲಾ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ತ್ವರಿತಾಗಿ ಮುಚ್ಚುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ನಗರದ ಎಲ್ಲ ರಸ್ತೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕಿದೆ. ಇದಕ್ಕಾಗಿ ಸೂಕ್ತ ಅನುದಾನ ಮೀಸಲಿರಿಸುವ ಮತ್ತು ಪಡೆದುಕೊಳ್ಳುವ ಕಾರ್ಯ ಆಗಬೇಕು ಎಂದು ವಿಧಾನ ಪರಿಷತ್ ಸದಸ್ಯರು ಮತ್ತು ಪಾಲಿಕೆಯ ಸದಸ್ಯರು ಸಲಹೆ ಮಾಡಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೇಟ್ಲಾಬುರ್ಜಾದಿಂದ ಮಾವಿನಕೆರೆಗೆ ಹೋಗುವ ಮುಖ್ಯ ರಸ್ತೆಗೆ ಹಾಗೂ ಮನ್ಸಲಪೂರು ಗ್ರಾಮದ ರಸ್ತೆಗೆ ಹೊಸ ನಾಮಕರಣ ಮಾಡಿ ನಾಮಫಲಕ ಅಳವಡಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ನ್ಯಾಯಾಲಯದ ಮತ್ತು ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದನ್ವಯ ವಾರ್ಡವಾರು ಬೀದಿ ನಾಯಿಗಳ ಗಣತಿ ಮಾಡುವ ಕುರಿತು ಮತ್ತು ಹೊಸ ಆಧುನಿಕ ಎಬಿಸಿ ಶೇಡ್ ನಿರ್ಮಾಣ ಮಾಡುವ ಬಗ್ಗೆ ಚರ್ಚಿಸಲಾಯಿತು. ಮಹಾನಗರ ಪಾಲಿಕೆಯ



ವ್ಯಾಪ್ತಿಯಲ್ಲಿನ ಪತ್ರಕರ್ತರಿಗೆ ದಾವಣಗೇರಿ ಜಿಲ್ಲೆಯ ಮಾದರಿಯಲ್ಲಿ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪಿಸಿ, ಮಹಾನಗರ ಪಾಲಿಕೆಯಲ್ಲಿ ಪ್ರತಿ ವರ್ಷದ ಬಜೆಟ್‌ನಲ್ಲಿ ಅನುದಾನ ಮೀಸಲಿಟ್ಟು ಆರೋಗ್ಯ ವಿಮೆ ಸೌಲಭ್ಯ ಒದಗಿಸುವ ಕುರಿತು ಸಭೆಯಲ್ಲಿ ನಿರ್ಣಯಿಸಲಾಯಿತು.

ನಿವೇಶನ ರಹಿತ ಪತ್ರಕರ್ತರಿಗೆ ನಿಯಮಾನುಸಾರ ಅನುಮೋದನೆ ಪಡೆದು ನಿವೇಶನ ಪೂರೈಸುವ ಕುರಿತು ಸಭೆಯಲ್ಲಿ ತೀರ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆಯ ಉಪಾಧ್ಯಕ್ಷರಾದ ಸಾಜೀದ್ ಸಮೀರ್, ಪಾಲಿಕೆಯ ಸದಸ್ಯರಾದ ಜಯಣ್ಣ, ಎನ್ ಶ್ರೀನಿವಾಸರೆಡ್ಡಿ ಸೇರಿದಂತೆ ವಿವಿಧ ವಾರ್ಡ್ ಸದಸ್ಯರು, ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲು ಬಿಎಸ್‌ಪಿ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.28–** ಕಲ್ಯಾಣ ಕರ್ನಾಟಕ ಸೇರಿದಂತೆ ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿ ಪ್ರಕೃತಿ ವಿಕೋಪದಿಂದ ಅಪಾರ ಪ್ರಮಾಣದ ಹಾನಿಯಾಗಿದ್ದು, ನಿರಂತರ ಮಳೆಯಿಂದಾಗಿ ಬೆಳೆಗಳು ನಾಶವಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಈ ಹಿನ್ನೆಲೆಯಲ್ಲಿ, ಬೆಳೆ ನಷ್ಟ ಪರಿಹಾರವನ್ನು ವಿತರಿಸಲು ಮತ್ತು ಪ್ರದೇಶಕ್ಕೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲು ಬಹುಜನ ಸಮಾಜಪಕ್ಷ (ಬಿಎಸ್‌ಪಿ) ಮಾನ್ವಿ ಘಟಕದ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಒತ್ತಾಯಿಸಿತು.



ಕಳೆದ ಎರಡು ತಿಂಗಳಿಂದ ಮುಂದುವರೆದ ಅಕಾಲಿಕ ಮಳೆಯು ಲಕ್ಷಾಂತರ ಹೆಕ್ಟೇರ್ ಪ್ರದೇಶದ ಬೆಳೆಗಳನ್ನು ಸಂಪೂರ್ಣವಾಗಿ ನಾಶಗೊಳಿಸಿದೆ. ಮುಖ್ಯವಾಗಿ ಹತ್ತಿ, ತೊಗರಿ, ಸಜ್ಜೆ, ಹೆಸರು, ಭತ್ತ, ಮೆಣಸಿನಕಾಯಿ, ಸೋಯಾಬಿನ್, ಜೋಳ ಸೇರಿದಂತೆ ಪ್ರಮುಖ ಬೆಳೆಗಳು ಸಂಪೂರ್ಣವಾಗಿ ಹಾಳಾಗಿವೆ.

ಕಲ್ಯಾಣ ಕರ್ನಾಟಕ ಭಾಗವನ್ನು ರಾಷ್ಟ್ರೀಯ ವಿಪತ್ತು ಪ್ರದೇಶ ಎಂದು ಘೋಷಿಸಬೇಕು, ಬೆಳೆ ನಷ್ಟಕ್ಕೆ ಪ್ರತಿ ಎಕರೆಗೆ ರೂ. 25,000/– ಪರಿಹಾರ ನೀಡಬೇಕು, ರೈತರ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು, ಹಾಗೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಮನ್ವಯತೆಯಿಂದ ರೈತರಿಗೆ ಅನುಕೂಲವಾಗುವಂತೆ ಪರಿಹಾರ ನೀಡಬೇಕು.


ಅಕ್ಟೋಬರ್ ತಿಂಗಳವರೆಗೂ ಮಳೆ ಮುಂದು ವರೆದಿರುವುದರಿಂದ, ಕಟಾವಿಗೆ ಬಂದಿದ್ದ ಮುಂಗಾರು ಹಂಗಾಮಿನ ಭತ್ತದ ಬೆಳೆಗಳು ಮಳೆಯಿಂದ ನೆಲಕ್ಕುರುಳಿವೆ. ಮತ್ತೊಂದೆಡೆ, ಕಾಳು ಕಟ್ಟುವ ಹಂತದಲ್ಲಿರುವ ಭತ್ತದ ಬೆಳೆಗೆ ದುಂಡಾಣು ಎಲೆರೋಗದ ಸಮಸ್ಯೆ ಎದುರಾಗಿದೆ. ಈ ರೋಗದಿಂದಾಗಿ ಭತ್ತ ಒಣಗಿದಂತಾಗಿ ಕಾಳು ಕಟ್ಟುವಿಕೆಯಲ್ಲಿ ಭಾರೀ ಇಳುವರಿ ಕುಸಿಯುವ ಭೀತಿಯು ರೈತರನ್ನು ಕಾಡುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮನವಿಯಲ್ಲಿ, ಈಗಾಗಲೇ ಕೃಷಿ ಇಲಾಖೆ ಹಾಗೂ ಕಂದಾಯ ಇಲಾಖೆಯಿಂದ ಜಂಟಿ ಸಮೀಕ್ಷೆಯನ್ನು ಕೆಲವೆಡೆ ಕೈಗೊಂಡಿದ್ದರೂ, ಪೂರ್ಣ ಪ್ರಮಾಣದಲ್ಲಿ ಸರ್ವೆ ಕಾರ್ಯವನ್ನು ಕಾರ್ಯಗತಗೊಳಿಸಲು ಆಗ್ರಹಿಸಲಾಗಿದೆ. ಸರಕಾರವು ವಿಪತ್ತು ನಿರ್ವಹಣೆಗೆ ಹೆಚ್ಚಿನ ಒತ್ತು ನೀಡಿ, ಕೇಂದ್ರ ಸರಕಾರದ ಸಹಕಾರದೊಂದಿಗೆ ರಾಜ್ಯದಲ್ಲಿ ಸಂಕಷ್ಟದಲ್ಲಿರುವ ರೈತರ ನೆರವಿಗೆ ಕೂಡಲೇ ಧಾವಿಸಬೇಕು ಮತ್ತು ಹಾನಿಯಾದ ಬೆಳೆಗಳಿಗೆ ಹಾಗೂ ಪ್ರದೇಶಗಳಿಗೆ ಸರ್ಕಾರವು ಅತೀ ಶೀಘ್ರದಲ್ಲಿ ಪರಿಹಾರವನ್ನು ಕೂಡಲೇ ವಿತರಿಸಬೇಕೆಂದು ಬಿಎಸ್‌ಪಿ ಆಗ್ರಹಿಸಿದೆ.(2ನೇಪುಟಕ್ಕೆ)

## ನ.1 ರಂದು ಕನ್ನಡ ರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲು ಕರೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.28–**ಪಟ್ಟಣದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಹಾಗೂ ದಾಸ ಶ್ರೇಷ್ಠರಾದ ಕನಕದಾಸ ಜಯಂತಿ ಆಚರಣೆ ಅಂಗವಾಗಿ ನಡೆದ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಮಾತನಾಡಿ, ನ.1 ರಂದು ನಡೆಯುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಕನ್ನಡಿಗರೆಲ್ಲ ಸೇರಿಕೊಂಡು ಅದ್ದೂರಿಯಾಗಿ ಅರ್ಥಪೂರ್ಣವಾಗಿ ಆಚರಿಸುವುದಕ್ಕೆ ತಾಲೂಕು ಆಡಳಿತದ ಜೊತೆಗೆ ತಾಲೂಕಿನ ವಿವಿಧ ಕನ್ನಡ ಪರ ಸಂಘಟನೆಗಳವರು ಹಾಗೂ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ನ.1 ರಂದು ಬೆಳಿಗ್ಗೆ 10 ಕ್ಕೆ ಪಟ್ಟಣದ ಬಸವ ವೃತ್ತದಿಂದ ತಹಸೀಲ್ದಾರ್ ಕಚೇರಿಯಲ್ಲಿನ ವೇದಿಕೆಯವರೆಗೆ ನಾಡದೇವಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆ . ವೇದಿಕೆಯಲ್ಲಿ ಕನ್ನಡ ಭಾಷೆ ಹಾಗೂ ಇತಿಹಾಸ ವಿಷಯದ ಕುರಿತು ಉಪನ್ಯಾಸ, ಕನ್ನಡ ವಿಷಯದಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಪ್ರತಿಬಾವಂತ ವಿದ್ಯಾರ್ಥಿಗಳಿಗೆ ತಾಲೂಕು ಆಡಳಿತದ ವತಿಯಿಂದ ಸನ್ಮಾನಿಸಿ ಗೌರವಿಸಲಾಗುವುದು. ಕನ್ನಡ ರಾಜ್ಯೋತ್ಸವ ಅಂಗವಾಗಿ ಪಟ್ಟಣದ ಎಲ್ಲಾ ಚಲನಚಿತ್ರಗಳಲ್ಲಿ ಕಡ್ಡಾಯವಾಗಿ ಕನ್ನಡ ಚಲನ ಚಿತ್ರಗಳನ್ನು ಮಾತ್ರ ಪ್ರದರ್ಶಿಸುವಂತೆ ಸೂಚನೆ ನೀಡಲಾಗುವುದು. ನ.8 ರಂದು ತಾಲೂಕು ಆಡಳಿತ ಹಾಗೂ ಹಾಲುಮತ ಸಮಾಜದವರ ಸಹಕಾರದೊಂದಿಗೆ ಕನಕದಾಸ ಜಯಂತಿ ಆಚರಣೆ ಅಂಗವಾಗಿ ಪಟ್ಟಣದ ಬೀರಲಿಂಗೇಶ್ವರ ವೃತ್ತದಲ್ಲಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಕನಕದಾಸರ ಭಾವಚಿತ್ರ ಮೆರವಣಿಗೆ ನಡೆಸಲಾಗುವುದು ವೇದಿಕೆಯಲ್ಲಿ ಉಪನ್ಯಾಸಕರಿಂದ ಕನಕದಾಸರ ಜೀವನ ಹಾಗೂ ಅವರ ಸಂದೇಶಗಳ ಕುರಿತು ವಿಶೇಷ ಉಪನ್ಯಾಸ ಸೇರಿದಂತೆ ಸಮುದಾಯದಲ್ಲಿನ ಪ್ರತಿಭವಂತ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಹಾಗೂ ಸಮುದಾಯದಲ್ಲಿನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಮಾಡಿ ಗೌರವಿಸಲಾಗುವುದು(2ನೇಪುಟಕ್ಕೆ)




## ಚಿಕ್ಕಸೂಗೂರಿನಲ್ಲಿ ವೇಗದೂತ ಬಸ್ಸುಗಳ ನಿಲುಗಡೆಗೊಳಿಸುವಂತೆ ಜಿಲ್ಲಾಧಿಕಾರಿಗೆ ಮನವಿ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.28–** ರಾಷ್ಟ್ರೀಯ ಹೆದ್ದಾರಿ 167ಕ್ಕೆ ಹೊಂದಿಕೊಂಡಿರುವ ಚಿಕ್ಕಸೂಗೂರು ಗ್ರಾಮದಲ್ಲಿ ಎಲ್ಲಾ ವೇಗದೂತ ಬಸ್ಸುಗಳನ್ನು ನಿಲುಗಡೆಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ದಲಿತ ಸೇನೆ ಜಿಲ್ಲಾ ಸಮಿತಿಯ ವತಿಯಿಂದ ಮನವಿ ಸಲ್ಲಿಸಲಾಯಿತು.

ದಲಿತ ಸೇನೆಯ ಜಿಲ್ಲಾಧ್ಯಕ್ಷ ಮಾರುತಿ ಚಿಕ್ಕಸೂಗೂರು ಅವರು ಮಾತನಾಡಿ, "ಚಿಕ್ಕಸೂಗೂರು ಗ್ರಾಮವು ಸುಮಾರು 50 ಕ್ಕೂ ಹೆಚ್ಚು ಕೈಗಾರಿಕೆಗಳನ್ನು ಒಳಗೊಂಡ ಕೈಗಾರಿಕಾ ವಲಯವಾಗಿದ್ದು, ಸಾವಿರಾರು ಕಾರ್ಮಿಕರು ಹಾಗೂ ವಿವಿಧ ರಾಜ್ಯ–ಜಿಲ್ಲೆಗಳಿಂದ ಬಂದ ಜನರು ಇಲ್ಲಿ ಕೆಲಸ ಮಾಡುತ್ತಿದ್ದಾರೆ. ವಡ್ಡರು, ಹೆಗ್ಗಸನಹಳ್ಳಿ, ಹನುಮದೊಡ್ಡಿ, ಹೊಸಪೇಟೆ, ಗಂಜಳ್ಳಿ ಸೇರಿದಂತೆ ಅನೇಕ ಗ್ರಾಮಗಳ ಜನರ ಸಂಚಾರ ಕೇಂದ್ರವಾಗಿರುವ ಈ ಪ್ರದೇಶದಲ್ಲಿ ವೇಗದೂತ ಬಸ್ಸುಗಳು ನಿಲುಗಡೆ ಆಗದಿರುವುದು ಜನರಿಗೂ, ವಿದ್ಯಾರ್ಥಿಗಳಿಗೂ ಅಸೌಕರ್ಯ ಉಂಟುಮಾಡುತ್ತಿದೆ" ಎಂದರು.

ಅವರು ಮುಂದುವರೆದು, "ಈ ಕುರಿತು ಹಲವು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಕೇವಲ ಪತ್ರದ ಮಟ್ಟದಲ್ಲೇ ಸ್ಪಂದನೆ ದೊರೆತಿದೆ. ಆದ್ದರಿಂದ ಈ ಬಾರಿ ಜಿಲ್ಲಾಧಿಕಾರಿಗಳು ಹಾಗೂ ಸಾರಿಗೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಚಿಕ್ಕಸೂಗೂರು 1ನೇ ಮತ್ತು 2ನೇ(2ನೇಪುಟಕ್ಕೆ)

## ಬೆಳೆ ಪರಿಹಾರ ನೀಡುವಂತೆ ರೈತರಿಂದ ಒತ್ತಾಯ



ಯುವ ಮಾರ್ಗ ಸುದ್ದಿ

**ಸಿರವಾರ, ಅ.28–**ತಾಲೂಕಿನಾದ್ಯಾಂತ ಅಕಾಲಿಕ ಮಳೆಯಿಂದ ಹಾಳಾಗಿರುವ ಭತ್ತ, ಹತ್ತಿ, ತೊಗರಿ ಬೆಳೆಗೆ ಸರ್ಕಾರದಿಂದ ಪರಿಹಾರ ಮಂಜೂರು ಮಾಡಿಸಬೇಕು ಮತ್ತು ಬೆಳೆ ವಿಮೆಯನ್ನು ತ್ವರಿತಗತಿಯಲ್ಲಿ ರೈತರ ಖಾತೆಗಳಿಗೆ ಜಮಾವಣೆ ಮಾಡಿಸಬೇಕು ಎಂದು ಒತ್ತಾಯಿಸಿ ನೂರಾರು ರೈತರು ತಹಸೀಲ್ದಾರ ಅಶೋಕಪವಾರ ಅವರಿಗೆ ಮನವಿ ಪತ್ರ ನೀಡುವ ಮೂಲಕ ಒತ್ತಾಯಿಸಿದ್ದಾರೆ.

ಕಳೆದ ಒಂದು ತಿಂಗಳಿನಿಂದ ಹಲವಾರು ಬಾರಿ ಹವಮಾನ ವೈಪರೀತ್ಯದಿಂದಾಗಿ ಮತ್ತು ಚಂಡಮಾರುತಗಳಿಂದಾಗಿ ವಾಡಿಕೆಗಿಂತ ಹೆಚ್ಚು ಮಳೆ ಸಿರವಾದ ತಾಲೂಕಿನಲ್ಲಿ ಆಗಿದ್ದು, ಈ ಮಳೆಯು ಈ ಭಾಗದ ರೈತರ ಅನ್ನವನ್ನು ಕಸಿದುಕೊಂಡಿದೆ, ವಿಪರೀತ ಮಳೆಯಿಂದಾಗಿ ಭತ್ತದ ಬೆಳೆಗೆ ನಾನಾ ರೀತಿಯಾದ ಕೀಟಭಾದೆಯ ಕಾಟದಿಂದ ಮತ್ತು ದುಂಡಾಣು ವೈರಸ್‌ನಿಂದ ಸಾವಿರಾರು ಹೆಕ್ಟೇರ್‌ಗಳಲ್ಲಿ ಬೆಳೆದ ಭತ್ತದ ಬೆಳೆಯೆಲ್ಲಾ ಸಂಪೂರ್ಣವಾಗಿ ನಾಶವಾಗಿದೆ. ಬೀಜಗಳಿಗೆ, ಗೊಬ್ಬರಗಳಿಗೆ, ಕೀಟನಾಶಕಗಳು ಸೇರಿದಂತೆ ಹಲವಾರು ಕಾರ್ಯಗಳಿಗೆ ಸಾಲ ಸೋಲ ಮಾಡಿದ ರೈತ ಇಂದು ಸರಿಯಾದ ಬೆಳೆ ಕಾಣದೇ ತಲೆಯ.(2ನೇಪುಟಕ್ಕೆ)

# ಸಂಘಸಂಸ್ಥೆ ಚಟುವಟಿಕೆ ನಿರ್ಬಂಧಕ್ಕೆ ತಡೆ

ಸಾರ್ವಜನಿಕ ಹಾಗೂ ಸರ್ಕಾರಿ ಜಾಗದಲ್ಲಿ 10 ಕ್ಕಿಂತ ಹೆಚ್ಚು ಜನ ಸೇರಿದರೆ ಅದನ್ನು ಅಕ್ರಮ ಕೂಟ ಎಂದು ಪರಿಗಣಿಸಿ ಆರ್‌ಎಸ್‌ಎಸ್‌ನ ಪಥ ಸಂಚಲನಕ್ಕೆ ಅನುಮತಿ ನೀಡದೆ ಇರುವ ಸರ್ಕಾರದ ಕ್ರಮ ಪ್ರಶ್ನಿಸಿ ಪುನಶ್ಚೇತನ ಸೇವಾ ಸಂಸ್ಥೆ ಹೈಕೋರ್ಟ್‌ನ ಧಾರವಾಡ ಪೀಠಕ್ಕೆ ರಿಟ್ ಅರ್ಜಿ ಸಲ್ಲಿಸಿತ್ತು.

ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಎನ್ ನಾಗಪ್ರಸನ್ನ ಇದ್ದ ಅವರ ಪೀಠ ಸರ್ಕಾರದ ಆದೇಶಕ್ಕೆ ಮಧ್ಯಂತರ ತಡೆ ನೀಡಿ ಸರ್ಕಾರ, ಗೃಹ ಇಲಾಖೆ, ಹುಬ್ಬಳ್ಳಿ ಪೊಲೀಸ್ ಆಯುಕ್ತರಿಗೆ ನೋಟಿಸ್ ಜಾರಿ ಮಾಡಿದೆ.

ರಾಜ್ಯ ಸರ್ಕಾರ 2025 ರ ಅಕ್ಟೋಬರ್ 18 ರಂದು ಹೊರಡಿಸಿದ್ದ ಆದೇಶದಲ್ಲಿ ಅನುಮತಿ ಇಲ್ಲದೆ ಹತ್ತು ಜನ ಸೇರಿದರೆ ಅಪರಾಧ ಎಂದು ಹೇಳಿದೆ. ರಸ್ತೆ, ಪಾರ್ಕ್, ಮೈದಾನ, ಕೆರೆ ಇತ್ಯಾದಿ ಪ್ರವೇಶಕ್ಕೂ ನಿರ್ಬಂಧ ವಿಧಿಸಿದೆ. ಪೊಲೀಸ್ ಕಾಯ್ದೆಯಲ್ಲಿ ಇರುವ ಅಧಿಕಾರವನ್ನು ಸರ್ಕಾರ ಆದೇಶದ ಮೂಲಕ ಚಲಾಯಿಸಿದೆ. ಸಂವಿಧಾನದ ಆರ್ಟಿಕಲ್ 19(1) ಎ,ಬಿ ನೀಡಿರುವ ಹಕ್ಕನ್ನು ಸರ್ಕಾರ ಕಿತ್ತುಕೊಂಡಿದೆ. ಸಂವಿಧಾನ ನೀಡಿರುವ ಹಕ್ಕನ್ನು ಸರ್ಕಾರಿ ಆದೇಶ ಕಿತ್ತುಕೊಳ್ಳಲಾಗದು ಎಂದು ನ್ಯಾಯಪೀಠ ಹೇಳಿದೆ.

ಸರ್ಕಾರದ ಆದೇಶದ ಸಂವಿಧಾನ ಬಾಹಿರ ಎಂದು ಪುನಶ್ಚೇತನ ಸೇವಾ ಸಂಸ್ಥೆ ಪರ ವಕೀಲ ಅಶೋಕ್ ಹಾರ್ನಳ್ಳಿ ವಾದ ಮಂಡಿಸಿದ್ದರು. ಇದನ್ನು ಪುರಸ್ಕರಿಸಿದ ನ್ಯಾಯಾಲಯ ಈ ಆದೇಶ ಮೇಲ್ನೋಟಕ್ಕೆ ಕಾನೂನುಬಾಹಿರವಾಗಿದೆ ಎಂದು ಕಂಡು ಬಂದಿದ್ದು, ಸಂವಿಧಾನ ಕೊಟ್ಟ ಮೂಲಭೂತ ಹಕ್ಕನ್ನು ಸರ್ಕಾರದ ಒಂದು ಆದೇಶದ ಮೂಲಕ ಕಿತ್ತುಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿ ಆದೇಶಕ್ಕೆ ಮಧ್ಯಂತರ ತಡೆ ನೀಡಿದೆ.

ಈ ಸಂದರ್ಭದಲ್ಲಿ ರಾಜ್ಯ ಸರ್ಕಾದರ ಪರ ವಕೀಲರು ವಾದ ಮಂಡಿಸಲು ಒಂದು ದಿನ ಕಾಲಾವಕಾಶ ಕೇಳಿದ್ದು, ನ್ಯಾಯಾಲಯ ನಿಮಗೆ ನೋಟಿಸ್ ಕೊಡಲಾಗುತ್ತದೆ. ನೀವು ವಾದ ಮಾಡಿ ಎಂದು ಹೇಳಿ ವಿಚಾರಣೆಯನ್ನು ಮುಂದೂಡಿತು.

# ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲು ಬಿಎಸ್‌ಪಿ ಮನವಿ

ಇದಲ್ಲದೆ, ಕೇಂದ್ರ ಸರ್ಕಾರವು ಕೂಡಾ ಈ ಪರಿಹಾರ ಕಾರ್ಯಕ್ಕೆ ವಿಶೇಷ ಅನುದಾನ ನೀಡಬೇಕೆಂದು ಬಹುಜನ ಸಮಾಜಪಕ್ಷ ಮಾನ್ವಿ ಘಟಕದ ವತಿಯಿಂದ ಮನವಿಯನ್ನು ಸಲ್ಲಿಸಲಾಗಿದೆ.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಶ್ಯಾಮಸುಂದರ ಕುಂಬದಾಳ, ಕಾರ್ಯದರ್ಶಿ ಬಸವರಾಜ ನಿಲೋಗಲ್, ಅಧ್ಯಕ್ಷ ಮುದುಕಪ್ಪ ನಾಯಕ, ರಮೇಶ ನಾಯಕ ಗವಿಗಟ್, ವಿರುಪನಗೌಡ ಜಟ್ಟಿ, ವೆಂಕಟೇಶ ನಂದಿಹಾಳ,

# ಬೆಳೆ ಪರಿಹಾರ ನೀಡುವಂತೆ ರೈತರಿಂದ ಒತ್ತಾಯ

ಮೇಲೆ ಕೈ ಹೊತ್ತು ಕೂರುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತ ಬೆಳೆದ ಜಮೀನುಗಳಲ್ಲಿ ಜಿಟಿಜಿಟಿ ಮಳೆಯಿಂದಾಗಿ ನಿರಂತರ ನೀರು ನಿಲುಗಡೆ ಮತ್ತು ಅಧಿಕ ತೇವಾಂಶದಿಂದ ಭತ್ತದ ಕಾಳುಗಳು ನೆಲಕ್ಕೆ ಬೀಳುತ್ತೇವೆ. ಇದರಿಂದಾಗಿ ಕೋಟ್ಯಂತರ ರೂಪಾಯಿಯ ಭತ್ತದ ಬೆಳೆ ನಾಶವಾಗಿವೆ. ಅಲ್ಲದೇ ಈ ಬಾರಿ ಮಾರಾಟವಾದ ಭತ್ತದ ಬೀಜಗಳು ಅತ್ಯಂತ ಕಳಪೆ ಮಟ್ಟದಿಂದ ಕೂಡಿದ್ದು, ಮಾರಾಟಗಾರರ ಮೇಲೆ ಕ್ರಮ ಕೈಗೊಂಡು ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕು.

ಕೂಡಲೇ ಸರ್ಕಾರದಿಂದ ತಾಲೂಕಿನಲ್ಲಿ ಭತ್ತದ ಬೆಳೆ ಬೆಳೆದ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಅಲ್ಲದೇ ರೈತರು ತಮ್ಮ ಬೆಳೆಗಳಿಗೆ ಮಾಡಿಸಿಕೊಂಡ ಬೆಳೆ ವಿಮೆಯನ್ನು ಸಹ ಅವರುಗಳ ಖಾತೆಗೆ ಅತ್ಯಂತ ತ್ವರಿತಗತಿಯಲ್ಲಿ ಜಮಾವಣೆ ಮಾಡಿದ್ದೇ ಆದಲ್ಲಿ ಸಾಲವನ್ನು ತೀರಿಸಲು ಅನುಕೂಲವಾಗುತ್ತದೆ. ಇಲ್ಲವಾದಲ್ಲಿ ಬೆಳೆ ನಷ್ಟದ ಖಿನ್ನತೆಗೆ ಒಳಗಾಗಿ ರೈತ ಕೊನೆಗೆ ಆತ್ಮಹತ್ಯೆಯಂತಹ ದುಷ್ಕೃತ್ಯಕ್ಕೆ ನೂಕಿದಂತಾಗುತ್ತದೆ.

ಹಾಗಾಗಿ ರೈತರ ಕಷ್ಟಕ್ಕೆ ಸೂಕ್ತವಾಗಿ ತಾವುಗಳು ತ್ವರಿತಗತಿಯಲ್ಲಿ ಸ್ಪಂಧಿಸಬೇಕು ಎಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಕಲ್ಲೂರು ಬಸವರಾಜ ನಾಯಕ, ವಿಜಯಕುಮಾರ ಗುಡದಮನೆ, ಬಸವರಾಜ ದಳಪತಿ, ವಿರುಪಾಕ್ಷಿಗೌಡ ನಂದರೆಡ್ಡಿ,ಎನ್.ವಿರೇಶ ಸಾಹುಕಾರ, ನಾಗಪ್ಪ ಗಡ್ಲ, ಪತ್ತರ ನಾಗಪ್ಪ,ಮಲ್ಲಿಕಾರ್ಜುನ ಚನ್ನೂರು, ಜಿ.ಸತ್ಯನಾರಾಯಣ,ಶಿವರಾಜ ಬೆಳವಿನೂರು, ಸುರೇಶ ಗೌಡ ತಡಕಲ್, ಟಿ.ಸುರೇಶಟಾಣಗುಂದಿ,ಚನ್ನಪ್ಪ ಗಡ್ಲ, ಮಹಾದೇವ, ಮನೋಹರ್, ವಿರೇಶ ಗಡ್ಲ, ಯಂಕಪ್ಪ ಗುಜ್ಜಾಲ,ಗೋವಿಂದ, ಆಂಜನೇಯ್ಯ,ರಂಗಪ್ಪ, ಸೇರಿದಂತೆ ನೂರಾರು ರೈತರು ಇದರು

# ಚಿಕ್ಕಸೂಗೂರಿನಲ್ಲಿ ವೇಗದೂತ ಬಸ್ಸುಗಳ ನಿಲುಗಡೆಗೊಳಿಸುವಂತೆ ಜಿಲ್ಲಾಧಿಕಾರಿಗೆ ಮನವಿ

ಕ್ರಾಸ್‌ನಲ್ಲಿ (ಸ್ಟೇಜ್ ಸಂಖ್ಯೆ 03 ಮತ್ತು 04) ಎಲ್ಲಾ ವೇಗದೂತ ಬಸ್ಸುಗಳನ್ನು ನಿಲುಗಡೆ ಮಾಡುವಂತೆ ಸೂಚನೆ ನೀಡಬೇಕು. ಇಲ್ಲವಾದಲ್ಲಿ ಸಾರ್ವಜನಿಕ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನಮ್ಮ ಸಂಘಟನೆ ಮುಂದಿನ ದಿನಗಳಲ್ಲಿ ಬಸ್ ತಡೆ ಹೋರಾಟ ಕೈಗೊಳ್ಳಲಿದೆ" ಎಂದು ಎಚ್ಚರಿಸಿದರು.

ಮನವಿ ಸಲ್ಲಿಸುವ ವೇಳೆ ದಲಿತ ಸೇನೆಯ ಸದಸ್ಯರಾದ ಕೃಷ್ಣ ಮಾರ್ಷಲ್, ಬಾಬುರಾವ್, ಈರಣ್ಣ ಕುರ್ಡಿ, ಕ.ರ.ವೇ ಮುಖಂಡರಾದ ಸುರೇಶ ಬಾಬು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನ.1 ರಂದು ಕನ್ನಡ ರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲು ಕರೆ

ಎಂದು ತಿಳಿಸಿದರು ಕರ್ನಾಟಕ ರಕ್ಷಣ ವೇದಿಕೆ ತಾ.ಅಧ್ಯಕ್ಷರಾದ ಬಸವನಗೌಡ ಮಾತನಾಡಿ ತಾಲೂಕಿನಲ್ಲಿ ಹೆಚ್ಚಿನ ಅಂಗಡಿಗಳ ನಾಮಫಲಕ ಅಂಗ್ಲ ಭಾಷೆಯಲ್ಲಿ ಬರೆಸಿರುವುದರಿಂದ ಅಂತಹ ನಾಮಫಲಕಗಳನ್ನು ತೆರವುಗೊಳಿಸುವಂತೆ ಒತ್ತಾಯಿಸಿದರು.

ತಾ.ಚುಟುಕು ಸಾಹಿತ್ಯ ಪರೀಷತ್ ತಾ.ಅಧ್ಯಕ್ಷರಾದ ಮಹಮ್ಮದ್ ಮುಜೀಬ್ ಮಾತನಾಡಿದರು. ತಾ.ಕುರುಬ ಸಮಾಜದ ಅಧ್ಯಕ್ಷರಾದ ಸತ್ಯನಾರಾಯಣ ,ಅಜಯಕುಮಾರ,ಸೇರಿದಂತೆ ಇನ್ನಿತರರು ಮಾತನಾಡಿದರು

ಗ್ರೇಡ್ –2 ತಹಸೀಲ್ದಾರ್ ಅಬ್ದುಲ್ ವಾಹಿದ್, ಪಿ,ಐ, ಸೋಮಶೇಖರ್ ಎಸ್.ಕೆಂಚರೆಡ್ಡಿ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ತಾಲೂಕಿನ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದರು.

# ಟೆಡ್ಡಿಬಾಯ್ ಪ್ರಿಯಾಂಕ್ ಖರ್ಗೆ : ಬಿಜೆಪಿ ಲೇವಡಿ



**ದಿಸ್‌ಪುರ್, ಅ. 28–** ಸೆಮಿಕಂಡಕ್ಟರ್ ಕೈಗಾರಿಕೆಗಳ ಕುರಿತ ಹೇಳಿಕೆಯನ್ನು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿರುಚಿದ್ದಾರೆ ಎಂದ ಕರ್ನಾಟಕ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆಯನ್ನು ಅಸ್ಸಾಂ ಬಿಜೆಪಿ ಘಟಕ ಟೆಡ್ಡಿಬಾಯ್ ಎಂದು ಕರೆದಿದೆ.ಪ್ರಿಯಾಂಕ್ ಖರ್ಗೆ ಎಕ್ಸ ಸಂದೇಶಕ್ಕೆ ಪ್ರತಿಕ್ರಿಯಿಸಿರುವ ಅಸ್ಸಾಂ ಬಿಜೆಪಿ, ಸುದೀರ್ಘವಾದ ಪ್ರಬಂಧ ಬರೆದ ಕೂಡಲೇ ಯಾರೂ ಸೆಮಿಕಂಡಕ್ಟರ್ ತಜ್ಞ ಆಗುವುದಿಲ್ಲ. ಮೊದಲು, ದಕ್ಷಿಣ ಭಾರತದ ಬಡತನ ಶ್ರೇಯಾಂಕದಲ್ಲಿ ಅಗ್ರ ಸ್ಥಾನದಲ್ಲಿರುವ ನಿಮ್ಮ ಕಲಬುರಗಿ ಜಿಲ್ಲೆಯ ಬಗ್ಗೆ ಕಾಳಜಿ ವಹಿಸಿ ಎಂದು ಚಾಟಿ ಬೀಸಿದೆ.

ಹಲೋ ಟೆಡ್ಡಿ ಬಾಯ್, ಎಕ್ಸ್ ನಲ್ಲಿ ಸುದೀರ್ಘ ಪ್ರಬಂಧ ಬರೆಯುವುದರಿಂದ ನೀವು ಸೆಮಿಕಂಡಕ್ಟರ್ ತಜ್ಞ ಆಗಲಾರಿರಿ. ಅಸ್ಸಾಂ ಬಗ್ಗೆ ಉಪನ್ಯಾಸ ನೀಡುವ ಬದಲು ಆತ್ಮವಿಮರ್ಶೆ ಮಾಡಿಕೊಳ್ಳಿ. ದಕ್ಷಿಣ ಭಾರತದ ಬಡತನ ಶ್ರೆ?ಯಾಂಕದಲ್ಲಿ ನಿಮ್ಮ ಜಿಲ್ಲೆ ಅಗ್ರ ಸ್ಥಾನದಲ್ಲಿದೆ. ನಿಮ್ಮ ಟ್ಯಾಲೆಂಟ್ ಟ್ಯಾಂಕ್ ಬಗ್ಗೆ ತುಂಬಾನೇ ಹೇಳ್ತಿರಾ, ಅಲ್ವಾ ಎಂದು ಅಸ್ಸಾಂ ಬಿಜೆಪಿ ಎಕ್ಸ್ ಸಂದೇಶದಲ್ಲಿ ಉಲ್ಲೇಖಿಸಿದೆ.

ಕರ್ನಾಟಕಕ್ಕೆ ಬರಬೇಕಿರುವ ಸೆಮಿಕಂಡಕ್ಟರ್ ಕೈಗಾರಿಕೆಗಳ ಹೂಡಿಕೆಗಳನ್ನು ಕೇಂದ್ರ ಸರ್ಕಾರ ಅಸ್ಸಾಂ ಮತ್ತು ಗುಜರಾತ್ ರಾಜ್ಯಗಳಿಗೆ ತಿರುಗಿಸುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ಆರೋಪಿಸಿದ್ದರು. ಅಲ್ಲದೆ, ಸೆಮಿಕಂಡಕ್ಟರ್ ಕೈಗಾರಿಕೆಗಳು ವಾಸ್ತವದಲ್ಲಿ ಬಯಸಿರೋದು ಬೆಂಗಳೂರನ್ನು. ಆದರೆ, ಅಸ್ಸಾಂ ಮತ್ತು ಗುಜರಾತ್‌ಗೆ ಏಕೆ ಹೋಗುತ್ತಿವೆ? ಅಲ್ಲಿ ಪ್ರತಿಭೆಗಳು ಇವೆಯೇ ಎಂದು ಖರ್ಗೆ ಪ್ರಶ್ನಿಸಿದ್ದರು.ಇದು ಅಸ್ಸಾಂನ ಯುವ ಕರಿಗೆ ಮಾಡಿರುವ ಅವಮಾನ ಎಂದು ಹೇಳಿದ್ದ ಹಿಮಂತ ಬಿಸ್ವ ಶರ್ಮಾ, ಪ್ರಿಯಾಂಕ್ ಖರ್ಗೆ ಫಸ್ಟ್ ಕ್ಲಾಸ್ ಈಡಿಯಟ್ ಎಂದು ಟೀಕಿಸಿದ್ದರು. ಇದಕ್ಕೆ ಪ್ರತಿಯಾಗಿ ಪ್ರಿಯಾಂಕ್ ಖರ್ಗೆ ಎಕ್ಸ್ ತಾಣದಲ್ಲಿ ಸೆಮಿಕಂಡಕ್ಟರ್ ಬಗ್ಗೆ ಹಾಗೂ ಅಸ್ಸಾಂ ಕುರಿತು ಸುದೀರ್ಘ ಬರಹ ಪ್ರಕಟಿಸಿದ್ದರು.

ಇಕರ್ನಾಟಕದ ಐಟಿ ಸಚಿವರಿಗೆ ಅಸ್ಸಾಂ ಸಿಎಂ ಕೌಂಟರ್‌ಹಿಮಂತ ಬಿಸ್ವ ಶರ್ಮಾ ಹೇಳಿಕೆಯನ್ನು ತಿರುಚಿದ್ದಾರೆ ಎಂದು ಉಲ್ಲೇಖಿಸಿರುವ ಪ್ರಿಯಾಂಕ್ ಖರ್ಗೆ, ನೀತಿ ಆಯೋಗದ ಇತ್ತೀಚಿನ ವರದಿಯ ಪ್ರಕಾರ, ಸುಮಾರು ಒಂದು ದಶಕದ ಬಿಜೆಪಿ ಆಡಳಿತದ ನಂತರವೂ ಅಸ್ಸಾಂ ಇಂದು ಆರೋಗ್ಯ, ಶಿಕ್ಷಣ ಮತ್ತು ಆರ್ಥಿಕ ಬೆಳವಣಿಗೆಯಂತಹ ನಿರ್ಣಾಯಕ ಅಭಿವೃದ್ಧಿ ಸೂಚ್ಯಂಕಗಳಲ್ಲಿ ಕೊನೆಯ ಐದು ರಾಜ್ಯಗಳಲ್ಲಿ ಒಂದಾಗಿದೆ ಎಂದು ಉಲ್ಲೇಖಿಸಿದ್ದರು. ಇದಕ್ಕೆ ಅಸ್ಸಾಂ ಬಿಜೆಪಿ ತಿರುಗೇಟು ನೀಡಿದೆ.

# ಕಾಲುಬಾಯಿ ಜ್ವರ ರೋಗ ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಿ:ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ



**ಬೀದರ, ಅ.28–** ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಬೀದರ ಜಿಲ್ಲೆಯಾದ್ಯಂತ ಇದೇ ನವೆಂಬರ್.3 ರಿಂದ ಡಿಸೆಂಬರ್.3 ರವರೆಗೆ ಜಾನುವಾರುಗಳಿಗೆ ಎಂಟನೇ ಹಂತದ ಕಾಲುಬಾಯಿ ಜ್ವರ ರೋಗದ ಲಸಿಕೆ ನೀಡಲಾಗುತ್ತಿದ್ದು, ಈ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮ ಸಂಬಂಧ ಜಿಲ್ಲಾ ಮಟ್ಟದ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಎಲ್ಲ ಗ್ರಾಮಗಳಲ್ಲಿ ಎಲ್ಲ ಜಾನುವಾರುಗಳಿಗೆ ಈ ಲಸಿಕಾ ಚುಚ್ಚುಮದ್ದು ಲಭ್ಯವಾಗುವಂತೆ ವ್ಯಾಪಕ ಪ್ರಚಾರ ಬೇಕು. ಗ್ರಾಮ ಮಟ್ಟದಲ್ಲಿ ಪಿಡಿಓ, ಆಶಾ ಅಂಗನವಾಡಿ ಕಾರ್ಯಕರ್ತೆಯರು, ಕೃಷಿ ಸಖಿಯರು, ಕೆ.ಎಂ.ಎಫ್ ಹಾಗೂ ಶಿಕ್ಷಣ ಇಲಾಖೆ ಸೇರಿ ಈ ಲಸಿಕೆ ಕಾರ್ಯಕ್ರಮ ಕುರಿತು ಪ್ರಚಾರ ಮಾಡುವಂತೆ ಶಿವಾನಂದ ಕರಾಳೆ ತಿಳಿಸಿದರು.

ಎಲ್ಲ ಗ್ರಾಮಗಳಲ್ಲಿ ಗ್ರಾಮ ಪಂಚಾಯತ ವತಿಯಿಂದ ಡಂಗೂರ ಸಾರುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ ಒಂದು ಲಕ್ಷ ಜಾನುವಾರು ಕಡಿಮೆಯಾಗಿರುವುದಕ್ಕೆ ಕಳವಳ ವ್ಯಕ್ತಪಡಿಸಿದ ಅಪರ ಜಿಲ್ಲಾಧಿಕಾರಿಗಳು ಇಂಟಿಗ್ರೇಟೆಡ್ ಫಾಮಿರ್‌ಂಗೆ ಹೆಚ್ಚು ಒತ್ತು ನೀಡುವ ಕುರಿತು ರೈತರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಲಸಿಕೆಗಳು, ಸಿರೀಂಜ್ ಹಾಗೂ ತುರ್ತು ಔಷಧಿಗಳು ಸರಿಯಾಗಿ ಲಭ್ಯವಾಗುವಂತೆ ನೋಡಿಕೊಳ್ಳಬೇಕೆಂದು ಸಹ ತಿಳಿಸಿದರು.

ಪಶು ವೈದ್ಯಕೀಯ ಇಲಾಖೆಯ ಉಪನಿರ್ದೇಶಕ ಡಾ.ನರಸಪ್ಪ ಎ.ಡಿ. ಮಾತನಾಡಿ, ತಾಲ್ಲೂಕಾ ಹಾಗೂ ಗ್ರಾಮ ಮಟ್ಟದಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿಗಳ ತಂಡಗಳನ್ನು ರಚಿಸಲಾಗಿದೆ. ರೈತರ ಮನೆ ಬಾಗಿಲಿಗೆ ತೆರಳಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಕಾರ್ಯದರ್ಶಿ ಸೂರ್ಯಕಾಂತ ಬಿರಾದಾರ ಹಾಘೂ ತಾಲ್ಲೂಕು ಮಟ್ಟದ ಪಶು ಇಲಾಖೆ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚಿಕಪೇಟ್‌ನಲ್ಲಿ 450 ನವದಂಪತಿಗಳ ಸರಳ ಸಾಮೂಹಿಕ ವಿವಾಹ



**ಬೀದರ್ ,ಅ.28–**ತಾಲೂಕಿನ ಚಿಕಪೇಟ್ ಗ್ರಾಮದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಭಾನುವಾರ ಮಧ್ಯಾಹ್ನ 12.25ಕ್ಕೆ ಸುಮಾರು 450 ನವದಂಪತಿಗಳ ಸರಳ ಸಾಮೂಹಿಕ ವಿವಾಹ ಸಮಾರಂಭ ಭವ್ಯವಾಗಿ ನೆರವೇರಿತು ಇದರಲ್ಲಿ ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ ಮತ್ತು ಕ್ರೈಸ್ತ ಧರ್ಮದ ನವದಂಪತಿಗಳ ಸುಮಾರು 160 ಕ್ಕಿಂತ ಹೆಚ್ಚು ಜೋಡಿಗಳ ಸರಳ ವಿವಾಹವನ್ನು ಮಾಡಲಾಯಿತು.ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ನವದಂಪತಿಗಳು ಈ ಸಮಾರಂಭದಲ್ಲಿ ಹೊಸ ಜೀವನಕ್ಕೆ ಪಾದಾರ್ಪಣೆ ಮಾಡಿದರು.

ಕಾರ್ಯಕ್ರಮವನ್ನು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಂ ಖಾನ್ ಉದ್ಘಾಟಿಸಿದರು. ಬೌದ್ಧ ಧರ್ಮಗುರುಗಳಾದ ಭಂತೆ ಸಂಘಜ್ಯೋತಿ ಮತ್ತು ಭಂತೆ ಧಮ್ಮರತ್ನ, ಮುಸ್ಲಿಂ ಧರ್ಮ ಗುರು ಎಂ.ಡಿ. ಆಸೀಫ್ ಮೌಲಾನಾ ಹಾಗೂ ಕ್ರೈಸ್ತ ಧರ್ಮದ ಪಾಸ್ಟರ್ ರೇ. ಬ್ರಹ್ಮಾನಂದ ನವದಂಪತಿಗಳಿಗೆ ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಅನೀಲಕುಮಾರ ಬೆಲ್ದಾರ್, ಅವಿನಾಶ ದೀನೆ, ಬಸವರಾಜ ಮಾಳಗೆ, ಶ್ರೀಪತರಾವ ದೀನೆ, ಬಾಬುರಾವ ಪಾಸ್ವಾನ ಮತ್ತು ರಮೇಶ ಡಾಕುಳಗಿ ಮುಂತಾದ ಮುಖಂಡರು ಮಾತನಾಡಿ, ಸಂಸ್ಥೆಯ ಸಾಮಾಜಿಕ ಸೇವೆ ಮತ್ತು ನವದಂಪತಿಗಳ ಭವಿಷ್ಯಕ್ಕೆ ಶುಭ ಹಾರೈಸಿದರು.

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಉಮೇಶ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಯೋಗೇಶ್ ಡಿ., ಗಿರೀಶ ರಂಜೋಳ್ಕರ್ ಉಪಸ್ಥಿತರಿದ್ದರು. ವಿವಿಧ ಸಂಘಟನೆಗಳ ಪ್ರತಿನಿಧಿಗಳು, ಶಿಕ್ಷಕರು ಹಾಗೂ ಸಮಾಜದ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.ಕಾರ್ಯಕ್ರಮದ ಸ್ವಾಗತವನ್ನು ಭಗತ್ ಸಿಂಧೆ, ನಿರೂಪಣೆಯನ್ನು ರೂಮಕ್ಕ ಜೊಯಲ್, ವಂದನಾರ್ಪಣೆಯನ್ನು ರಾಹುಲ ಡಾಂಗೆ ನೆರವೇರಿಸಿದರು. ಈ ಸಂದರ್ಭದಲ್ಲಿ ಸುಮಾರು 50 ಜನರು ರಕ್ತದಾನ ಮಾಡಿದರು. ಶ್ರದ್ಧಾ ಆಟಾ ಕಂಪನಿಯ ವಿಜಯಕುಮಾರ ರೆಡ್ಡಿ ಕಲಬುರ್ಗಿ ಅವರು ನವದಂಪತಿಗಳಿಗೆ ಉಡುಗೊರೆಗಳನ್ನು ನೀಡಿದರು.

ಈ ಸಮಾರಂಭವನ್ನು "ಮೇರಾ ಭಾರತ ಮಹಾನ್ ಸಾಂಸ್ಕೃತಿಕ ಮತ್ತು ಸಾಮಾಜಿಕ ಕಲ್ಯಾಣ ಸಂಸ್ಥೆ (ರಿ.) ಬೀದರ್" ಆಯೋಜಿಸಿತ್ತು ಎಂದು ಸಂಸ್ಥೆಯ ಅಧ್ಯಕ್ಷ ಕಲ್ಯಾಣರಾವ ಗೂನಳ್ಳಿಕರ್ ತಿಳಿಸಿದ್ದಾರೆ.

### ಸಿರವಾರ: ಕರವೇ ಪ್ರವೀಣ ಶೆಟ್ಟಿ ಬಣದ ಪದಾಧಿಕಾರಿಗಳ ಸಭೆ

# ತಾಲೂಕಿನ ಪ್ರತಿ ಗ್ರಾಮಗಳಲ್ಲಿ ಕನ್ನಡ ಧ್ವಜಾರೋಹಣ ಮಾಡಿ – ಕೆ.ರಾಘವೇಂದ್ರ

ಯುವ ಮಾರ್ಗ ಸುದ್ದಿ

**ಸಿರವಾರ, ಅ.28–**ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ್ ಶೆಟ್ಟಿ) ಬಣದ ತಾಲೂಕು ಮತ್ತು ಹೋಬಳಿ ಘಟಕಗಳ ಪದಾಧಿಕಾರಿಗಳ ಸಭೆಯನ್ನು ಪಟ್ಟಣದ ತಾಲೂಕ ಕಾರ್ಯಾಲಯದಲ್ಲಿ ಅಧ್ಯಕ್ಷರಾದ ಕೆ.ರಾಘವೇಂದ್ರ ಖಾಜನಗೌಡ ಅವರ ನೇತೃತ್ವದಲ್ಲಿ ಕರೆಯಲಾಗಿತ್ತು.ಸಭೆಯಲ್ಲಿ ಕನ್ನಡ ರಾಜ್ಯೋತ್ಸವದ ಅಚರಣೆ ಮತ್ತು ಸಂಘಟನೆ ಬಲಪಡಿಸುವದು ಮತ್ತು ಪ್ರತಿ ಗ್ರಾಮದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಬೇಕು ಹಾಗೂ ಕ.ರ.ವೇ ಯ ಗುರ್ತಿನ ಚೀಟಿ ಪಡೆಯಬೇಕು ಸೇರಿದಂತೆ ಇನ್ನಿತರ ಚರ್ಚೆಗಳನ್ನು ಮಾಡಲಾಯಿತು.

ನವೆಂಬರ್ 1ರಂದು ಸಿರವಾರ ತಾಲೂಕಿನ ಪ್ರತಿ ಗ್ರಾಮಗಳಲ್ಲಿ ಕನ್ನಡ ಧ್ವಜಾರೋಹಣ ಮಾಡುವಂತೆ ಪದಾಧಿಕಾರಿಗಳಿಗೆ ಅಧ್ಯಕ್ಷ ಕೆ.ರಾಘವೇಂದ್ರ ಖಾಜನಗೌಡ ಅವರು ಹೇಳಿದರು.

ಈ ಸಂಧರ್ಭದಲ್ಲಿ ಕ.ರ.ವೇ ತಾಲೂಕು ಅಧ್ಯಕ್ಷರಾದ ರಾಘವೇಂದ್ರ ಖಾಜನಗೌಡ. ವೆಂಕಟೇಶ್ ಶಂಕ್ರಿ.ಮಹಿಳಾ ತಾಲೂಕು ಅಧ್ಯಕ್ಷರಾದ ಮಲ್ಲಮ್ಮ.ವಾಳಿಂಗರಾಯ ಗೌತಮಿ. ಕಸ್ತೂರಿ.ನಾಗೇಶ್



ನವಲಕಲ್.ಸಾಬಣ್ಣ ಹುಣಚೇಡ. ಭೀಮರಾಯ ಅಂಬಿಗರ. ರಮೇಶ ನಾಯಕ. ವೆಂಕಟೇಶ ಕಲ್ಲಂಗೇರ. ಸಂಜೀವ ನಾಯಕ ಪಾಮದೊಡ್ಡಿ . ಗುರುಬಸವ ಗೋಲ್ಲದಿನ್ನಿ. ಆಂಜನೇಯ ಬಲ್ಲಟಿಗಿ. ಮುಕ್ಕಣ್ಣ. ಬಸವರಾಜ ನಾಯಕ ಚಿಕ್ಕ ಬಾದರದಿನ್ನಿ. ದೇವಣ್ಣ ನವಲಕಲ್. ಹನುಮಂತ ಪಿಡಬ್ಲ್ಯೂಡಿ. ಸಬ್ಜಲಿ ಭಾಗ್ಯನಗರ ಕ್ಯಾಂಪ್. ಹುಲ್ಲೇಶ ಮಲ್ಲಿಕಾರ್ಜುನ ಇನ್ನು ಮುಂತಾದವರು ಇದ್ದರು.

# ಪೊಲೀಸರಿಗೆ ಹೊಸ ಕ್ಯಾಪ್



**ಬೆಂಗಳೂರು, ಅ.28–**ಪೊಲೀಸರು ಇಂದಿನಿಂದ ಹೊಸ ಟೋಪಿಗಳಲ್ಲಿ ಮಿಂಚಲಿದ್ದಾರೆ ರಾಜ್ಯದ ಪೊಲೀಸ್ ಕಾನ್ಸೇಬಲ್ ಹಾಗೂ ಹೆಡ್ ಕಾನ್ಸ್‌ಟೇಬಲ್‌ಗಳಿಗೆ ಇಂದು ನೀಲಿ ವರ್ಣದ ಕ್ಯಾಪ್ ಗಳನ್ನ ವಿತರಿಸಲಾಗಿದ್ದು ಸಾಂಪ್ರದಾಯಿಕ ಹಳೆಯ ಸ್ಲೋಚ್ ಟೋಪಿಗಳಿಗೆ ತಿಲಾಂಜಲಿ ನೀಡಲಾಗಿದೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲಿನಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ಪೊಲೀಸ್ ಕಾನ್ಸೇಬಲ್ ಮತ್ತು ಹೆಡ್ ಕಾನ್ಸೇಬಲ್ಗಳಿಗೆ ಹೊಸ ಕ್ಯಾಪ್ ಗಳನ್ನ ವಿತರಿಸಿದರು. ಬೆಂಗಳೂರಿನ ಪೋಲಿಸರಿಗೆ ವಿತರಣೆಯಾಗಿದ್ದು ಪೊಲೀಸ್ ಕಾನ್ಸೇಬಲ್ ಹಾಗೂ ಇನ್ನು ಮುಂದೆ ನೀಲಿ ಬಣ್ಣದ ಕ್ಯಾಪ್ ಧರಿಸಲಿದ್ದಾರೆ ರಾಜ್ಯದಲ್ಲಿ ಪೊಲೀಸ್ ಕಾನ್ಸೇಬಲ್ ಗಳು ನೀಲಿ ವರ್ಣದ ಗ್ಯಾಪ್ ಗಳಲ್ಲಿ ಮಿಂಚುವರು ಕಳೆದ ಜೂನ್ ನಲ್ಲಿ ನಡೆದಿದ್ದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮಾವೇಶದಲ್ಲಿ ಪೊಲೀಸ್ ಕಾನ್ಸೇಬಲ್ ಮತ್ತು ಹೆಡ್ ಕಾನ್ಸೇಬಲ್ಗಳಿಗೆ ಹೊಸ ಕ್ಯಾಪ್ ವಿತರಿಸುವ ಬಗ್ಗೆ ನಿರ್ಧರಿಸಲಾಗಿತ್ತು ತೆಲಂಗಾಣ ಪೋಲೀಸರು ಧರಿಸುತ್ತಿರುವ ತೆಳುವಾದ ನೀಲಿ ಬಣ್ಣದ ಪಿಕ್ಯಾಪ್ ನೀಡಲು ರಾಜ್ಯ ಸರ್ಕಾರ ಒಪ್ಪಿಗೆ ಸೂಚಿಸಿದ್ದು ಅದರಂತೆ ಇಂದಿನಿಂದ ಪೊಲೀಸ್ ಕಾನ್ಸೇಬಲ್ ಮತ್ತು ನೀಡಲಾಗಿದೆ

ರಾಜ್ಯದಲ್ಲಿ ಪೊಲೀಸ್ ಸಿಬ್ಬಂದಿಗೆ ಸ್ಲೋಚ್ ಹ್ಯಾಟ್ ಬದಲಿಗೆ 'ಪೀಕ್ ಕ್ಯಾಪ್' ಬಂದಿದೆ, ಹಿಂದೆ ರಾಜ್ಯದ ಕಾನ್‌ಸ್ಟೇಬಲ್ ಹಾಗೂ ಹೆಡ್ ಕಾನ್‌ಸ್ಟೇಬಲ್‌ಗಳು ಧರಿಸುತ್ತಿದ್ದ ಸ್ಲೋಚ್ ಹ್ಯಾಟ್ ಕ್ಯಾಪ್‌ನಲ್ಲಿ ಬದಲಾವಣೆ ತರಲಾಗಿದೆ.

ಕೇರಳದಲ್ಲಿ ಪೀಕ್ ಕ್ಯಾಪ್ ಧರಿಸಲಾಗುತ್ತಿದ್ದು, ಇದು ನೀಲಿ ಬಣ್ಣವನ್ನು ಹೊಂದಿದೆ. ಸಾರ್ವಜನಿಕ ಮನ್ನಣೆ ಮತ್ತು ಅಧಿಕಾರ ಪ್ರಜ್ಞೆಯನ್ನು ಸಂಕೇತವಾಗಿದ್ದು, ಇದು ಬಿಸಿಲು ಮತ್ತು ಮಳೆಯಿಂದ ರಕ್ಷಿಸುವ ಕೂಡ ಸಹಾಯವಾಗಿದೆ. ಚಪ್ಪಟೆಯಾದ ಮೇಲ್ಭಾಗ, ಬಾಗಿದ ಮುಖವಾಡ ಮತ್ತು ಮುಂಭಾಗದಲ್ಲಿ ಕೇರಳ ಪೊಲೀಸ್ (ಕೆಪಿ) ಲಾಂಛನವನ್ನು ಹೊಂದಿದೆ.

ಮಹಾರಾಷ್ಟ್ರ ಪೊಲೀಸ್ ಕಾನ್‌ಸ್ಟೇಬಲ್ ಕ್ಯಾಪ್ "ಪೀಕ್ ಕ್ಯಾಪ್" ಅಥವಾ ಸಾಂಪ್ರದಾಯಿಕ ಪೊಲೀಸ್ ಕ್ಯಾಪ್ ಎಂದು ಕರೆಯಲಾಗುತ್ತದೆ. ಇದು ಕಡು ನೀಲಿ ಬಣ್ಣದ ಟೋಪಿಯಾಗಿದ್ದು, ಚಪ್ಪಟೆಯಾದ ಮೇಲ್ಭಾಗ ಮತ್ತು ಬಾಗಿದ ವಿನ್ಯಾಸವನ್ನು ಹೊಂದಿದೆ. ಕ್ಯಾಪ್‌ನ ಮುಂಭಾಗದಲ್ಲಿ ಮಹಾರಾಷ್ಟ್ರ ಪೊಲೀಸ್ ಲಾಂಛನವಿದ್ದು, ಇದು ನಕ್ಷತ್ರ ಮತ್ತು ರಕ್ಷಣೆಯನ್ನು ಸೂಚಿಸಲು ಎರಡು ವೃತ್ತವನ್ನು ಒಳಗೊಂಡಿದೆ.

ಆಂಧ್ರಪ್ರದೇಶದ ಪೊಲೀಸ್ ಕಾನ್ಸ್ ಟೇಬಲ್‌ಗಳು ಕ್ಯಾಪ್‌ನ್ನು ಪೀಕ್ ಕ್ಯಾಪ್ ಎಂದು ಕರೆಯಲಾಗುತ್ತದೆ. ಇದು ನೀಲಿ ಬಣ್ಣವನ್ನು ಹೊಂದಿದೆ. ಗೋವಾದಲ್ಲಿ "ಪೀಕ್ ಕ್ಯಾಪ್" ಧರಿಸಿಕೊಳ್ಳಲಾಗುತ್ತದೆ. ಈ ಕ್ಯಾಪ್‌ನ ಮುಂಭಾಗದಲ್ಲಿ ಸಾಮಾನ್ಯವಾಗಿ ಪೊಲೀಸ್ ಪಡೆಯ ಲಾಂಛನ ಇದೆ. ಈ ಲಾಂಛನವು ಅಧಿಕಾರ ಮತ್ತು ಜವಾಬ್ದಾರಿಯ ಸಂಕೇತವಾಗಿದೆ.

ತೆಲಂಗಾಣದಲ್ಲಿ ಕಾನ್‌ಸ್ಟೇಬಲ್ ಮತ್ತು ಹೆಡ್ ಕಾನ್‌ಸ್ಟೆಬಲ್‌ಗಳು "ನೇವಿ ಬ್ಲೂ ಪೀಕ್ ಕ್ಯಾಪ್" ಬಳಸುತ್ತಾರೆ. ಇದೀಗ ಕರ್ನಾಟಕಕ್ಕೂ ಕೂಡ ಈ ಕ್ಯಾಪ್‌ಗಳನ್ನು ಬಳಸಲಾಗುತ್ತದೆ. ಇದು ಬಿಗಿಯಾದ ಫಿಟ್, ಸುಧಾರಿತ ವಿನ್ಯಾಸ ಮತ್ತು ವೃತ್ತಿಪರ ನೋಟವನ್ನು ನೀಡುತ್ತದೆ.

ದೆಹಲಿ ಪೊಲೀಸ್ ಕಾನ್‌ಸ್ಟೇಬಲ್ ತೆಗಳು ಧರಿಸುವ ಅತ್ಯಂತ ಸಾಮಾನ್ಯ ಶೈಲಿಯ ಕ್ಯಾಪ್, ಕಾನ್‌ಸ್ಟಬಲ್‌ಗಳು "ಬೆರೆಟ್ ಕ್ಯಾಪ್" ಹಾಕಿಕೊಳ್ಳುತ್ತಾರೆ. ಇದು ಅನೌಪಚಾರಿಕ ಸಮವಸ್ತ್ರಗಳ ಭಾಗವಾಗಿದೆ. ಇದು ಮಿಲಿಟರಿ ಶೈಲಿಯ ಕ್ಯಾಪ್ ಆಗಿದ್ದು, ಅದರ ನೋಟ ಕೂಡ ಅದೇ ರೀತಿ ಇದೆ. ಮೃದುವಾದ, ದುಂಡಗಿನ, ಚಪ್ಪಟೆಯಾಗಿದ್ದು, ಕಡು ನೀಲಿ ಬಣ್ಣದಲ್ಲಿರುತ್ತದೆ.

ತಮಿಳುನಾಡು ಪೊಲೀಸ್ ಕಾನ್‌ಸ್ಟಬಲ್‌ಗಳು ಧರಿಸುವ ಕ್ಯಾಪ್ "ಪೀಕ್ ಕ್ಯಾಪ್", ಇದನ್ನು ಶಿಖರ ಕ್ಯಾಪ್ ಎಂದು ಕೂಡ ಕರೆಯುತ್ತಾರೆ. ನೌಕಾ ನೀಲಿ ಅಥವಾ ಖಾಕಿ ಬಣ್ಣವನ್ನು ಹೊಂದಿರುತ್ತದೆ.

# ಬಿ.ಎಲ್. ಎ-2 ಕಾರ್ಯಾಗಾರ, ಆತ್ಮನಿರ್ಭರ ಅಭಿಯಾನ



**ಬೀದರ್,ಅ.28–**ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 229 ಬೂತ್‌ಗಳಿದ್ದು, ಪ್ರತಿ ಬೂತ್‌ಗಳಲ್ಲಿ ಬಿಎಲ್‌ಎಗಳು ಪರಿಷ್ಕರಣೆಗಾಗಿ ಹೋದಂತ ಸಮಯದಲ್ಲಿ ಬಿಜೆಪಿ ಕಾರ್ಯಕರ್ತರು ಜತೆಯಲ್ಲಿದ್ದುಕೊಂಡು ಸಹಕಾರ ನೀಡಬೇಕು ಎಂದು ಮತದಾರ ಪರಿಷ್ಕರಣ ಪಟ್ಟಿಯ ಕಾರ್ಯಾಗಾರದ ಜಿಲ್ಲಾ ಪ್ರಭಾರಿ, ಮಾಜಿ ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಪಾಟೀಲ ಹೇಳಿದರು.

ಬೀದರ್ ನಗರದ ನೌಬಾದನಲ್ಲಿರುವ ಬಿಜೆಪಿ ಜಿಲ್ಲಾ ಪಕ್ಷದ ಕಚೇರಿಯಲ್ಲಿ ಭಾರತೀಯ ಜನತಾ ಪಾರ್ಟಿ ಬೀದರ್ ದಕ್ಷಿಣ ಕ್ಷೇತ್ರದ ವತಿಯಿಂದ ನಡೆದ ಬಿ.ಎಲ್. ಎ-2 ಕಾರ್ಯಾಗಾರ ಹಾಗೂ ಆತ್ಮನಿರ್ಭರ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮತದಾರ ಪಟ್ಟಿಯಲ್ಲಿ ಮೃತರಾದವರು, ಗ್ರಾಮ, ಪಟ್ಟಣ ಬಿಟ್ಟು ಹೋಗಿರುವವರನ್ನು ಗುರುತಿಸಬೇಕು ಮತ್ತು ಅನೇಕ ಕಡೆಗಳಲ್ಲಿ ಬರುವ ಹೆಸರನ್ನು ತೆಗೆದು ಹಾಕುವ ಕೆಲಸ ಮಾಡಬೇಕು ಅದೆ ರೀತಿ ಹೊಸ ಮತದಾರರನ್ನು ಸೇರಿಸಬೇಕು ಎಂದು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಮಾತನಾಡಿ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ರಾಜ್ಯದಲ್ಲಿರುವ ನಿಜವಾದ ಮತದಾರರು ಮಾತ್ರ ಮತದಾನ ಮಾಡುವಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬ ಬೂತ್ ಏಜೆಂಟರದ್ದಾಗಿರುತ್ತದೆ ಎಲ್ಲ ಕಾರ್ಯಕರ್ತರ ಶ್ರಮ ಅತ್ಯಂತ ಅವಶ್ಯಕವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮ ನಿರ್ಭರ ಯೋಜನೆಯನ್ನು ಪ್ರತಿ ಮನೆಗೆ ತಲುಪಿಸುವ ಗುರಿ ಹೊಂದಿದೆ. ಹೀಗಾಗಿ "ಸ್ವದೇಶಿ ನಮ್ಮ ಜೀವನ ಮಂತ್ರ ಆಗಿರಬೇಕು. ವಿದೇಶಿ ವಸ್ತುಗಳ ಮೇಲಿನ ಅವಲಂಬನೆ ಕಡಿಮೆ ಮಾಡಿ, ನಮ್ಮ ದೇಶದಲ್ಲೇ ತಯಾರಾದ ಸ್ವದೇಶಿ ವಸ್ತುಗಳನ್ನು ಖರೀದಿಸೋಣ. ಈ ಮೂಲಕ ಪ್ರತಿಯೊಬ್ಬ ಭಾರತೀಯನ ಪ್ರಗತಿಗೆ ಕೈಜೋಡಿಸೋಣ ಎಂದರು.

ದೇಶ ಆತ್ಮ ನಿರ್ಭರವಾಗಲು ಸ್ಥಾನಿಕವಾಗಿ ದೇಸಿಯ ವಸ್ತುಗಳ ಬಳಕೆ ಹೆಚ್ಚಬೇಕು. ಈ ನಿಟ್ಟಿನಲ್ಲಿ ಪಕ್ಷದಿಂದ ಜಾಗೃತಿ ಮೂಡಿಸುವ ಕಾರ್ಯ ಆಗಬೇಕು.

ಆಮದು ಕಡಿಮೆಯಾಗಿ ರಫ್ತು ಜಾಸ್ತಿ ಆಗಬೇಕು, ನಾವೆಲ್ಲರೂ ಸ್ವದೇಶಿ ಉತ್ಪನ್ನಗಳ ಬಳಕೆಗೆ ಧ್ವನಿಯಾಗಬೇಕು. ನಾವೆಲ್ಲರೂ ನಮ್ಮ ಮನೆಗಳಲ್ಲಿ ಬಳಸುವ ವಸ್ತು ಸ್ವದೇಶಿ ಇರುವಂತೆ, ಸ್ಥಳೀಯ ಉತ್ಪನ್ನವನ್ನೇ ಖರೀದಿಸುವಂತೆ ಗಮನ ಹರಿಸಿದರೆ ಖಂಡಿತ ಬದಲಾವಣೆ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಸೋಮನಾಥ್ ಪಾಟೀಲ್ ಮಾತನಾಡಿ, ಸ್ಥಳೀಯ ಜಿಪಂ. ತಾಪಂ ಚುನಾವಣೆಯೂ ಯಾವ ಸಂದರ್ಭದಲ್ಲಿ ಬೇಕಾದರೂ ಚುನಾವಣೆಯಾಗಬಹುದಾಗಿದ್ದು ಬಹುದಾಗಿದ್ದು ಕಾರ್ಯಕರ್ತರು ಚುನಾವಣೆ ಎದುರಿಸಲು ಸಿದ್ಧರಿರಬೇಕು. ಮೊದಲ ಹಂತದಲ್ಲಿ ಸರಿಯಾದ ಮತದಾರರ ಪಟ್ಟಿ ಪರಿಷ್ಕರಣೆಗೆ ಮುಂದಾಗಿದ್ದೇವೆ ಎಂದರು.

ಪ್ರತಿ ಬೂತ್‌ನಲ್ಲಿ ಬಿಎಲ್‌ಒಎಗಳು ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರು ಅವರ ಜೊತೆ ಸಹಕಾರ ನೀಡಬೇಕು ಎಂದು ಸೂಚಿಸಿದರು.

ಆತ್ಮನಿರ್ಭಾರ ಅಭಿಯಾನದ ಜಿಲ್ಲಾ ಸಂಚಾಲಕರಾದ ಬಾಬು ವಾಲಿ ಮಾತನಾಡಿ, ಸ್ವದೇಶಿ ವಸ್ತುಗಳನ್ನು ಖರೀದಿಸುವುದು ನಿಮ್ಮ ದೈನಂದಿನ ಅಗತ್ಯಗಳಿಗೆ ಸ್ವದೇಶಿ ಉತ್ಪನ್ನಗಳನ್ನು ಆಯ್ಕೆಮಾಡಿ. ಇದು ಸ್ಥಳೀಯ ಉತ್ಪಾದಕರಿಗೆ ಬೆಂಬಲ ನೀಡುತ್ತದೆ ಮತ್ತು ನಮ್ಮ ದೇಶದ ಆರ್ಥಿಕತೆಯನ್ನು ಬಲಪಡಿಸುತ್ತದೆ.

ಸ್ವದೇಶಿ ಬಗ್ಗೆ ಹೆಮ್ಮೆಯಿಂದ ಇರುವುದು ನಾವು ಸ್ವದೇಶಿ ಉತ್ಪನ್ನಗಳನ್ನು ಬಳಸುವುದರ ಬಗ್ಗೆ ಹೆಮ್ಮೆ ಪಡೋಣ. ಇದು ನಮ್ಮ ದೇಶದ ಉತ್ಪಾದಕತೆಗೆ ಮತ್ತು ಆರ್ಥಿಕತೆಗೆ ದೊಡ್ಡ ಕೊಡುಗೆ ನೀಡುತ್ತದೆ ಎಂದರು.

# ಮೋಂಥಾ ವಿಕೋಪ ರಕ್ಷಣೆಗೆ ಸಿದ್ಧತೆ: ಆಂಧ್ರ, ತಮಿಳುನಾಡು, ಪ.ಬಂಗಾಳದಲ್ಲೂ ಕಟ್ಟೆಚ್ಚರ



**ಬೆಂಗಳೂರು, ಅ.28–** ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದ ಸೃಷ್ಟಿಯಾಗಿರುವ ಮೋಂಥಾ ಚಂಡಮಾರುತ ಸಂಜೆ ಆಂಧ್ರಪ್ರದೇಶದ ಕರಾವಳಿಗೆ ಅಪ್ಪಳಿಸಲಿದೆ. ಜತೆಗೆ ಮೋಂಥಾದ ಪ್ರಭಾವವು ತಮಿಳುನಾಡು, ಒಡಿಸ್ಸಾ, ಪಶ್ಚಿಮಬಂಗಾಳದ ಮೇಲೂ ಆಗಲಿದ್ದು, ಚಂಡ ಮಾರುತದಿಂದ ಯಾವುದೇ ವಿಕೋಪಗಳಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

ಆಂಧ್ರಪ್ರದೇಶ, ಒಡಿಸ್ಸಾ, ತಮಿಳುನಾಡು, ಪಶ್ಚಿಮ ಬಂಗಾಳ ಸರ್ಕಾರಗಳು ಚಂಡ ಮಾರುತವನ್ನು ಎದುರಿಸಲು ಹಲವು ಸಿದ್ಧತೆಗಳನ್ನು ಮಾಡಿಕೊಂಡಿವೆ.

ಮೋಂಥಾದ ಪರಿಣಾಮವಾಗಿ ಪ್ರತಿ ಗಂಟೆಗೆ 90 ಕಿ.ಮೀ. 100 ಕಿ.ಮೀ.ವರೆಗೂ ಗಾಳಿಯ ವೇಗ ಇರಲಿದೆ. ಈ ವೇಗ 110 ಕಿ.ಮೀ.ತಲುಪುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಅಂದಾಜಿಸಿದೆ.

ಚಂಡಮಾರುತದಿಂದ ಭಾರಿ ಮಳೆ, ಗಾಳಿ ಹೆಚ್ಚಾಗಲಿದ್ದು, ಇದರಿಂದ ಯಾವುದೇ ಅನಾಹುತಗಳಾಗದಂತೆ ಕಟ್ಟೆಚ್ಚರ ವಹಿಸಲಾಗಿದೆ. ಚಂಡಮಾರುತ ಪೀಡಿತ ಪ್ರದೇಶಗಳ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವ ಕಾರ್ಯವು ಬಿರುಸುನಿಂದ ಸಾಗಿದೆ.

ಚಂಡಮಾರುತದ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದ್ದು, ಚಂಡ ಮಾರುತದಿಂದ ವಿಕೋಪಗಳಾದಂತೆ ಎಲ್ಲ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಆಂಧ್ರ ಮತ್ತು ಒಡಿಸ್ಸಾ ಸರ್ಕಾರಗಳು ಮಾಡಿಕೊಂಡಿವೆ.

ಮೋಂಥಾ ಚಂಡಮಾರುತದ ಪ್ರಭಾವ ಈಗಾಗಲೇ ಆರಂಭವಾಗಿದ್ದು, ಆಂಧ್ರದ ಕರಾವಳಿಯಲ್ಲಿ ನಿನ್ನೆ ಬೆಳಗ್ಗೆಯಿಂದಲೇ ಮಳೆಯಾಗುತ್ತಿದ್ದು, ಇಂದು ಮತ್ತು ನಾಳೆ ಮಳೆಯ ತೀವ್ರತೆ ಹೆಚ್ಚಾಗಲಿದೆ.

ಒಡಿಸ್ಸಾ, ಪಶ್ಚಿಮ ಬಂಗಾಳ, ತಮಿಳುನಾಡಿನಲ್ಲಿ ಇಂದಿನಿಂದ ಶುಕ್ರವಾರದವರೆಗೂ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಾಗಾಗಿ ಒಡಿಸ್ಸಾದ ದಕ್ಷಿಣ ಭಾಗದ 8 ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಿ, ಆ ಭಾಗದ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವ ಕಾರ್ಯ ನಡೆದಿದೆ.

ಆಂಧ್ರ ಪ್ರದೇಶಧಲ್ಲಿ ಚಂಡಮಾರುತ ವಿಕೋಪ ತಡೆಯು ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಆಂಧ್ರ ಮುಖ್ಯಮಂತ್ರಿ ಚಂದ್ರಬಾಬುನಾಯ್ಡು ಅವರು ಅಧಿಕಾಗಿಳ ಜತೆ ಸಭೆ ನಡೆಸಿದ್ದಾರೆ.

ಪ್ರಧಾನಿ ಮೋದಿ ಸಹ ನಿನ್ನೆ ಮುಖ್ಯಮಂತ್ರಿ ಚಂದ್ರಬಾಬು ಜತೆ ಮಾತನಾಡಿ ಕೇಂದ್ರದಿಂದ ಅಗತ್ಯ ನೆರವಿನ ನೆರವು ಒದಗಿಸುವ ಭರವಸೆ ನೀಡಿದ್ದಾರೆ.

**ವಿಮಾನ ಮತ್ತು ರೈಲ್ವೆ ಸೇವೆಗಳ ವ್ಯತ್ಯಯ**

ಮೋಂಥಾದ ಪರಿಣಾಮ ಇಂದು ಮತ್ತುನಾಳೆ ಆಂಧ್ರ, ಒಡಿಸ್ಸಾ ಕರಾವಳಿ ಜಿಲ್ಲೆಗಳಲ್ಲಿ ವಿಮಾನ ಮತ್ತು ರೈಲ್ವೆ ಸೇವೆಗಳು ವ್ಯತ್ಯಯವಾಗುವ ಸಾಧ್ಯತೆಗಳು ಹೆಚ್ಚಿವೆ.

ಈಗಾಗಲೇ ಹಲವು ವಿಮಾನಯಾನ ಕಂಪನಿಗಳು ವಿಶಾಖಪಟ್ಟಣ ಸೇರಿದಂತೆ ಆಂಧ್ರದ ಕರಾವಳಿ ಜಿಲ್ಲೆಗಳು ಮತ್ತು ಒಡಿಸ್ಸಾದ ಕರಾವಳಿ ಜಿಲ್ಲೆಗಳಲ್ಲಿ ವಿಮಾನ ಯಾನ ಸೇವೆಯನ್ನು ರದ್ದು ಮಾಡಲಾಗಿದ್ದು, ಚೆನ್ನೈ ಮತ್ತು ವಿಶಾಖಪಟ್ಟಣ ಸೇರಿದಂತೆ ಆಂಧ್ರ ಪ್ರದೇಶಗಳ ವಿವಿಧ ಸ್ಥಳಗಳ ನಡುವಿನ 9 ವಿಮಾನ ಯಾನ ಸೇವೆನ್ನು ರದ್ದುಪಡಿಸಲಾಗಿದೆ.

ಸುರಕ್ಷತಾ ಕ್ರಮವಾಗಿ ಆಂಧ್ರದ ಪೂರ್ವ ಕರಾವಳಿ ಪ್ರದೇಶದಲ್ಲಿ ಓಡಾಡುವ ರೈಲುಗಳ ಸಂಚಾರವನ್ನು ರೈಲ್ವೇ ಇಲಾಖೆ ರದ್ದು ಮಾಡಿದೆ.

ಆಂಧ್ರದ ನಂದ್ಯಾಲ್, ಕಡಪಾ, ಅನ್ನಮಯ್ಯ, ಕರ್ನೂಲ್, ಅನಂತಪುರ, ಶ್ರೀ ಸತ್ಯಸಾಯಿ ಮತ್ತುಚಿತ್ತೂರು ಜಿಲ್ಲೆಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

ಒಡಿಸ್ಸಾ, ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನ ಹಲವು ಜಿಲ್ಲೆಗಳಲ್ಲೂ ಕಟ್ಟೆಚ್ಚರವಹಿಸಲಾಗಿದೆ. ಒಡಿಸ್ಸಾದ ಮಲ್ಕನ್‌ಗಿರಿ, ಪೋರಾಪುಟ್, ನಬರಗ್ ಪುರ, ರಾಯಘಡ, ಗಜಪತಿ ಗಜಾಂ, ಕಲಹಂಡಿ, ಮತ್ತು ಕಂದಾಂನಲ್ಲಿ ಎನ್‌ಡಿಆರ್‌ಎಫ್, ಎಸ್‌ಜಿಆರ್‌ಎಫ್ ಮತ್ತು ಅಗ್ನಿಶಾಮಕ ದಳಗಳನ್ನು ರಕ್ಷಣಾ ಕಾರ್ಯಗಳಿಗೆ ನಿಯೋಜಿಸಲಾಗಿದೆ.

ಬಂಗಾಳಕೊಲ್ಲಿಯಲ್ಲಿ ಸೃಷ್ಟಿಯಾಗಿರುವ ಮೋಂಥಾ ಚಂಡಮಾರುತ ಸಂಜೆ ಆಂಧ್ರದ ಕಾಕಿನಾಡ ಬಳಿಯ ಮಚಲಿ ಪಟ್ಟಣಂ, ಕಳಿಂಗ ಪಟ್ಟಣಂಗೆ ಅಪ್ಪಳಿಸಿದೆ ಎಂದು ಅಂದಾಜಿಸಲಾಗಿದೆ.

# ಪ್ರಭಾಕರ ಬೆಳ್ಳಿ, ಸಂಪತಕುಮಾರಿ ಸೇವಾ ನಿವೃತ್ತಿ ಸಮಾರಂಭ



**ಕಲಬುರಗಿ,ಅ.28–**ನಗರದ ಸೇಂಟ್ ಮೇರಿ ಶಾಲೆ ಆವರಣಲ್ಲಿರುವ ಮದರ ಥೆರೆಸಾ ಕಮ್ಯೂನಿಟಿ ಹಾಲ್‌ನಲ್ಲಿ ರವಿವಾರ ಚಿತ್ರಕಲಾ ಶಿಕ್ಷಕ ಪ್ರಭಾಕರ ಬೆಳ್ಳಿ ಹಾಗೂ ಸಹ ಶಿಕ್ಷಕಿ ಸಂಪತಕುಮಾರಿ ಅವರ ಸೇವಾ ವಯೋನಿವೃತ್ತಿ ಸಮಾರಂಭ ಯೋಜಿಸಲಾಗಿತ್ತು.

ಜಿಲ್ಲೆಯ ಅಫಜಲಪೂರ ತಾಲ್ಲೂಕ ಆತನೂರ ಸರಕಾರಿ ಆದರ್ಶ ವಿದ್ಯಾಲಯ ( ಆರ್. ಎಂ. ಎಸ್ ಎ) ಚಿತ್ರಕಲಾ ಶಿಕ್ಷಕರಾದ ಪ್ರಭಾಕರ ಬೆಳ್ಳಿ, ಕಲಬುರಗಿ ನಗರದಲ್ಲಿರುವ ಸಂತ ಜೋಸೆಫ್ ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕಿ ಸಂಪತ್ತಕುಮಾರಿ ದಂಪತಿ ಸೇವಾ ನಿವೃತ್ತಿ ಹೊಂದಿರುವ ಪ್ರಯುಕ್ತ ಸನ್ಮಾನ ಹಾಗೂ ಬೀಳ್ಕೊಡುವ ಸಮಾರಂಭ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ದಿವ್ಯ ಸಾನಿಧ್ಯ ವಹಿಸಿದ್ದ ಜಿಲ್ಲಾ ಮೇಲ್ವಿಚಾರಕರಾದ ಘನ ಜಾನ ಶಿಖಾಮಣಿ ಮತ್ತು ನಿವೃತ್ತ ಜಿಲ್ಲಾ ಮೇಲ್ವಿಚಾರಕರಾದ ಘನ ಸುಮಂತ.ಡಿ. ಸರಡಗಿ ರವರ ಪ್ರಾರ್ಥನೆ, ದೈವ ಸಂದೇಶ ಮತ್ತು ಆಶೀರ್ವಾದ ದೊಂದಿಗೆ ಮತ್ತು ಸ್ತುತಿ ಗೀತೆಗಳೊಂದಿಗೆ ಸಮಾರಂಭ ಪ್ರಾರಂಭಿಸಲಾಯಿತು.

ಹಿರಿಯ ಚಿತ್ರಕಲಾವಿದ ಡಾ.ವಿ.ಜಿ.ಅಂದಾನಿ ಸಮಾರಂಭ ಉದ್ಘಾಟಿಸಿದರು. ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ ನಮೋಶಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ನಿವೃತ್ತ ಉಪನಿರ್ದೇಶಕ ಶರಣಪ್ಪ ಕೋವಾಳಕರ್, ಚಿತ್ರ ಕಲಾವಿದ ಬಸವರಾಜ ಜಾನೆ, ಶಿಕ್ಷಣಾಧಿಕಾರಿ ಶಿವಗೊಂಡಪ್ಪ ಸಿದ್ದಣಗೋಳ , ಸಂಧ್ಯಾರಾಜ ಸ್ಯಾಮ್ಯುಯೆಲ್ ಕಾರ್ಯ ಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಸಣ್ಣ ಗೌಡ ಬಿರಾದಾರ ಮತ್ತು ಕಾರ್ಯ ಕ್ರಮದ ಕೇಂದ್ರ ಬಿಂದುಗಳಾಗಿರುವ ವಯೋ ಸಹಜ ನಿವೃತ್ತಿ ಹೊಂದಿರುವ ಪ್ರಭಾಕರ ಬೆಳ್ಳಿ ಮತ್ತು ಸಂಪತ್ತು ಕುಮಾರಿ ಅವರು ಜ್ಯೋತಿ ಬೆಳಗುವುದರ ಮೂಲಕ ಕಾರ್ಯ ಕ್ರಮಕ್ಕೆ ಚಾಲನೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಯುವರಾಜ್ ಗಾಡಿ , ಡಾ.ಪ್ರಕಾಶ ರಾಠೋಡ್, ಬಸವರಾಜ ಬಳ್ಳುಂಡಗಿ, ಜಿಲ್ಲಾಧ್ಯಕ್ಷ ಮಹೇಶ್ ಹೂಗಾರ್, ಜಿಲ್ಲಾಧ್ಯಕ್ಷ .ರಾಮಪ್ಪ ವಿ. ರಾಜ್ಯಾಧ್ಯಕ್ಷ ಟಿ.ಲಕ್ಷ್ಮೀ ನಾರಾಯಣ ಪ್ರಧಾನ ಕಾರ್ಯದರ್ಶಿ,. ಶಾಂತಕುಮಾರ್ ಜಂಟಿ ಕಾರ್ಯದರ್ಶಿ .ನಾಗೇಶಗೌಡ ಸಂಘಟನಾ ಕಾರ್ಯದರ್ಶಿ (ಚಿತ್ರಕಲೆ) ಶರಣಬಸಪ್ಪ ನಾಟಿಕರ್ ಮುಖ್ಯ ಗುರುಗಳು .ಪ್ರಕಾಶ ಎಸ್ ರಾಜರ ತ್ನ ಡಿ.ಕೆ. ವಾರ್ತಾ ಸಹಾಯಕರು ಹಾಗೂ ಶಾಲಾ ಸಿಬ್ಬಂದಿ ವರ್ಗ ದವರು, ಬೆಳ್ಳಿ ಪರಿವಾರದವರು ,ಬಂಧುಗಳು ಹಾಗೂ ಸ್ನೇಹಿತರು ಚಿತ್ರಕಲಾವಿದರು, ಚಿತ್ರಕಲಾ ಶಿಕ್ಷಕರು ಸಹಶಿಕ್ಷಕರು ಉಪಸ್ಥಿತರಿದ್ದರು.ಸಂಗಪ್ಪ ಸೇದಿ ಮನಿ ಕಾರ್ಯ ಕ್ರಮ ನಿರೂಪಿಸಿದರು. ನಾಗಪ್ಪ ಪ್ರಭು ಸ್ವಾಗತಿಸಿದರು.

ಯುವ ಮಾರ್ಗ



## ರಿಮ್ಸ್‌ನಲ್ಲಿ ಉಳಿದಿರುವ ಬಿ,ಎಸ್ಸಿ ನರ್ಸಿಂಗ್ ಸೀಟು ಹಂಚಿಕೆಗೆ ಅರ್ಜಿ ಆಹ್ವಾನ

**ರಾಯಚೂರು,ಅ.28–** ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 2025–26ನೇ ಸಾಲಿನಲ್ಲಿ ಕೆಇಎ ಮೂಲಕ ಅಂತಿಮ ಸುತ್ತಿನ ಸೀಟು ಹಂಚಿಕೆಯ ನಂತರ ಸಂಸ್ಥೆಯಲ್ಲಿ ಉಳಿದಿರುವ ಬಿ,ಎಸ್ಸಿ. ನರ್ಸಿಂಗ್ ಸೀಟುಗಳನ್ನು ಕಾಲೇಜಿನ ಆಡಳಿತ ಸಮಿತಿಯ ಮೂಲಕ ಹಂಚಿಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಸ್ಥೆಯಲ್ಲಿ ಬಿ,ಎಸ್ಸಿ. ನರ್ಸಿಂಗ್ ಕೋರ್ಸ್ನ 27 ಹಂಚಿಕೆಯಾಗದೆ ಉಳಿದಿರುವ ಸೀಟುಗಳಿಗೆ ಅಕ್ಟೋಬರ್ 30ರ ಬೆಳಿಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ಅರ್ಹ ಅಭ್ಯರ್ಥಿಗಳ ನೊಂದಣಿಯನ್ನು ರಿಮ್ಸ್ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಮಾಡಬಹುದಾಗಿದೆ. ಮಧ್ಯಾಹ್ನ 1ರ ನಂತರ ನೊಂದಾಯಿಸಿದ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಕರೆದು ಸೀಟು ಹಂಚಿಕೆಯನ್ನು ಮಾಡಲಾಗುವುದು.

ಸೂಚನೆ: ಕೆಇಎ ವತಿಯಿಂದ ದಾಖಲಾತಿ ಪರಿಶೀಲನೆಯಾಗಿ ಪರಿಶೀಲನಾ ಸ್ಲಿಪ್‌ನ್ನು ಪಡೆದಿರುವ ಎಲ್ಲಾ ಅರ್ಹ ಅಭ್ಯರ್ಥಿಗಳ ನೊಂದಣಿಯನ್ನು ಮಾಡಲಾಗುವುದು. ಕೆಇಎ ವತಿಯಿಂದ ನೊಂದಾಯಿಸಿಕೊಂಡಿರುವ ಅರ್ಹ ವಿದ್ಯಾರ್ಥಿಗಳನ್ನು ಸಿಇಟಿ ನೋಂದಣಿ ಸಂಖ್ಯೆಯನ್ನು ನಮೂದಿಸಿ ಕೆಇಎ ಮೆರಿಟ್ ಸಂಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುವುದು. ಈ ಸೀಟು ಹಂಚಿಕೆಗೆ ಇದುವರೆಗೂ ಕೆಇಎ ವತಿಯಿಂದ ಯಾವುದೇ ಸೀಟು ಹಂಚಿಕೆಯಾಗದಿರುವ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗುವುದು. ಕೆಇಎ ಮೆರಿಟ್ ಸಂಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುವುದು. ಕೆಇಎ ವತಿಯಿಂದ ದಾಖಲಾತಿ ಪರಿಶೀಲನೆಯಾಗಿ ಪರಿಶೀಲನಾ ಸ್ಲಿಪ್‌ನಲ್ಲಿ ನಮೂದಿಸಿರುವ ಎಲ್ಲಾ ಮೂಲದಾಖಲೆಗಳನ್ನು ಎರಡು ಜಿರಾಕ್ಸ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ನಿಗದಿತ ಸಮಯ ಹಾಗೂ ಸ್ಥಳದಲ್ಲಿ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಿಮ್ಸ್ ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಾಂಶುಪಾಲರಾದ ಶ್ರೀಶೈಲ್ ಶಂಕರಶೆಟ್ಟಿ ಮೊ: 9019656541, ಪ್ರಾಂಶುಪಾಲರಾದ ಶ್ರೀನಿವಾಸ ಮೊ: 7676147941, ಡಾಟಾ ಎಂಟ್ರಿ ಆಪರೇಟರ್ ಶೇಖ್ ಅಬ್ದುಲ್ ಮೊ: 7019783990ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪ್ರಾಂಶುಪಾಲರಾದ ಶ್ರೀಶೈಲ್ ಶಂಕರಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಟೋಬರ್ 31ರಂದು ಪಾಲಿಕೆಯಿಂದ ಬೀದಿ ಬದಿ ವ್ಯಾಪಾರಿಗಳಿಂದ ಸಭೆ

**ರಾಯಚೂರು,ಅ.28–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ (ಪಿಎಂ ಸ್ವ–ನಿಧಿ) ಯೋಜನೆಯಡಿ ಆರ್ಥಿಕ ಸೇರ್ಪಡೆಯನ್ನು ಹೆಚ್ಚಿಸುವುದು, ಡಿಜಿಟಲ್ ವಹಿವಾಟು ನಡೆಸಲು ಉತ್ತೇಜಿಸುವುದು, ಸಾಮರ್ಥ್ಯ ಅಭಿವೃದ್ಧಿಯನ್ನು ವೃದ್ಧಿಸುವುದು ಮತ್ತು ಬೀದಿ ಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರಿಗೆ ಸಾಮಾಜಿಕ ಭದ್ರತಾ ಯೋಜನೆಗಳನ್ನು ಕಲ್ಪಿಸುವುದನ್ನು ಖಚಿತಪಡಿಸಿಕೊಳ್ಳುವ ಮೂಲಕ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಕ್ಟೋಬರ್ 31ರ ಸಂಜೆ 4ಗಂಟೆಗೆ ಪಾಲಿಕೆಯ ಜೋನಲ್–01ರಲ್ಲಿ

ಬೀದಿ ಬದಿ ವ್ಯಾಪಾರದ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಮಾಜಿ ಟಿ.ವಿ.ಸಿ ಸದಸ್ಯರು ಹಾಗೂ ಆಸಕ್ತರು ಸಭೆಗೆ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನುಡಿದಂತೆಯೇ ನಡೆದ ಸಚಿವ ಸಂತೋಷ ಲಾಡ್: ಮೃತ ತಾಯಪ್ಪ ಕುಟುಂಬಕ್ಕೆ ಆರ್ಥಿಕ ಸಹಾಯ

**ಯಾದಗಿರಿ,ಅ.28–**ನುಡಿದಂತೆಯೇ ಸಚಿವ ಸಂತೋಷ ಲಾಡ್ ನಡೆದುಕೊಂಡಿದ್ದು, ಕೆಲ ದಿನಗಳ ಹಿಂದೆ ಇಲ್ಲಿನ ಮೃತ ತಾಯಪ್ಪ ಕುಟುಂಬಕ್ಕೆ ಭೇಟಿ ನೀಡಿ ಆರ್ಥಿಕ ಸಹಾಯ ಮಾಡುವುದಾಗಿ ಹೇಳಿದಂತೆಯೇ ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ಸಹಾಯ ಮಾಡಲಾಗಿದೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದರು.

ಸೋಮವಾರ ತಾಯಪ್ಪನ ಮನೆಗೆ ತೆರಳಿದ ಶಾಸಕರು ಫೌಂಡೇಶನಿದಿಂದ ಕಳುಹಿಸಿದ್ದ ಚೆಕ್ ವಿತರಿಸಿ ಮಾತನಾಡಿದರು.

ಕಾರ್ಮಿಕರ ಸ್ಮಾರ್ಟ್ ಕಾರ್ಡ ವಿತರಿಸುವ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಚಿವ ಸಂತೋಷ ಲಾಡ್ ಅವರು, ನಮ್ಮ ಮನೆಗೆ ಉಪಹಾರ ಸೇವಿಸಲು ಆಗಮಿಸಿದಾಗ ಪಕ್ಕದಲ್ಲಿ ತಾಯಪ್ಪ ಮೃತಪಟ್ಟ ವಿಷಯ ತಿಳಿದು ಕೂಡಲೇ ಅಲ್ಲಿಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದರು ಮತ್ತು ಆರ್ಥಿಕ ಸಹಾಯ ಮಾಡುವುದಾಗಿ ಭರವಸೆ ನೀಡಿದ್ದರು. ಅದರಂತೆಯೇ ಇಂದು ಆ ಕುಟುಂಬಕ್ಕೆ ನೀಡಿದ್ದಾಗಿ ಶಾಸಕರು ಹೇಳಿದರು.

ಇಂದಿನ ಕಾಲದಲ್ಲಿ ಕೇವಲ ಭರವಸೆ ನೀಡುವ ವ್ಯಕ್ತಿಗಳ ನಡುವೆ ನಮ್ಮ ಸಚಿವ ಲಾಡ್ ಅವರು ಬಡವರ ಮೇಲೆ ಇಟ್ಟ ಕಾಳಜಿ ಮೆಚ್ಚುವಂತಹದ್ದು ಎಂದರು.

ಈ ವೇಳೆ ಸಂತೋಷ್ ಲಾಡ್ ಟ್ರಸ್ಟ್ ವತಿಯಿಂದ ಅನಿಲ್ ಕುಮಾರ, ಯೂಥ್ ಕಾಂಗ್ರೆಸ್ ಸ್ಟೇಟ್ ಸೆಕ್ರೆಟರಿ ದೀಪಕ್ ರಾಜ್, ಮಲ್ಲಿಕಾರ್ಜುನ ಗೌಡರೆಡ್ಡಿ, ಗುರುಬಸಪ್ಪ ಗುಂಡಳ್ಳಿ ಇದ್ದರು.

## ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆ

# ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಅಗತ್ಯ ಕ್ರಮವಹಿಸಿ: ನಿತೀಶ್ ಕೆ.




ಯುವ ಮಾರ್ಗ ಸುದ್ದಿ

**ರಾಯಚೂರು.ಅ.28–** ಪ್ರಸಕ್ತ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನ ಯಡಿ ಬಿಳಿಜೋಳ ಖರೀದಿಸಲು ಅಗತ್ಯ ಕ್ರಮವಹಿಸಬೇಕೆಂದು ಜಿಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾದಿ ಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಕ್ಟೋಬರ್ 28ರಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ವಿಸಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಿಳಿಜೋಳ ಖರೀದಿ ಕುರಿತು ನಡೆದ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರವು 2025–26ನೇ ಸಾಲಿನ ಮುಂಗಾರು ಋತುವಿನಲಿ ಪ್ರತಿ ಕ್ವಿಂಟಾಲ್ ಹೈಬ್ರಿಡ್ ಬಿಳಿಜೋಳಕ್ಕೆ 3699 ರೂ. ಹಾಗೂ ಮಾಲ್ದಂಡಿ ಬಿಳಿಜೋಳಕ್ಕೆ 3749 ರೂ.ಗಳನ್ನು ನಿಗದಿ ಮಾಡಿದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿಜೋಳವನ್ನು ಅಧಿಕೃತ ಖರೀದಿ ಏಜೆನ್ಸಿಯಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಮುಖಾಂತರ ಖರೀದಿಸಲು ಅನುಮೋದನೆ ನೀಡಲಾಗಿದೆ ಎಂದರು.

ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬ ರಾಜು ನಿಗಮ ಮತ್ತು ನಿಗಮದ ವತಿಯಿಂದ ನೇಮಿಸಲಾಗುವ ಉಪ ಏಜೆನ್ಸಿಗಳಾದ ಟಿಎಪಿಎಮ್‌ಸಿ, ಪಿಎಸಿಎಸ್, ಎಫ್‌ಪಿಒಎಸ್, ಎಸ್‌ಹೆಚ್‌ಜಿಎಸ್‌ಗಳಿಂದ ಜಿಲ್ಲೆಯಲ್ಲಿ ಅಗತ್ಯಕ್ಕೆ ತಕ್ಕಂತೆ ಖರೀದಿ ಕೇಂದ್ರಗಳನ್ನು ತೆರೆದು ದಿನಾಂಕ:01.12.2025 ರಿಂದ 31.03.2026 ರವರೆಗೆ ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ರೈತರ ನೋಂದಣಿ ಕಾರ್ಯ ಕೈಗೊಳ್ಳಬೇಕು. ಹಾಗೂ ದಿನಾಂಕ:01.01.2026 ರಿಂದ 31.03.2026 ಅವಧಿಯವರೆಗೆ ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಎಫ್.ಎ.ಕ್ಯೂ ಮಾನದಂಡಗಳನ್ವಯ ಬಿಳಿಜೋಳ ಖರೀದಿ ಕಾರ್ಯ ಕೈಗೊಳ್ಳಬೇಕೆಂದರು.

ಸರ್ಕಾರದಿಂದ ನೇಮಿಸಲ್ಪಟ್ಟ ನೋಡಲ್ ಏಜೆನ್ಸಿಯಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವು ಕೇಂದ್ರ ಸರ್ಕಾರವು ನಿಗಧಿಪಡಿಸಿದ ಮಾನದಂಡಗಳನ್ವಯ ಬಿಳಿಜೋಳವನ್ನು ಖರೀದಿ ಹಂತದಲ್ಲಿ ಎಫ್‌ಎಕ್ಯೂ ಗುಣಮಟ್ಟವನ್ನು ದೃಢೀಕರಿಸಿ ಪ್ರತಿ ಕೇಂದ್ರದಲಿ ಮೂರನೇ ವ್ಯಕ್ತಿ ಗುಣಮಟ್ಟ ಪರೀಕ್ಷಕರನ್ನು ನೇಮಿಸಲು ಟೆಂಡರ್ ಕರೆಯಬೇಕು. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಜಿಲ್ಲೆಗಳಲ್ಲಿನ ಕಾರ್ಯ ಪ್ರಗತಿ ಬಗ್ಗೆ ಆಗ್ಗಿಂದಾಗೆ ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ರೈತರ ನೋಂದಣಿ ಮತ್ತು ಖರೀದಿ ಪ್ರಕ್ರಿಯೆಯನ್ನು ಬಯೋಮೆಟ್ರಿಕ್ ಆಧಾರದಲಿಯೇ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ವೇಳೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಮಾತನಾಡಿ, ಪ್ರತಿ ರೈತರಿಂದ ಹಿಡುವಳಿಯನ್ನಾಧರಿಸಿ ಪ್ರತಿ ಎಕರೆಗೆ 15 ಕ್ವಿಂಟಾಲ್‌ನಂತೆ ಗರಿಷ್ಠ 150 ಕ್ವಿಂಟಾಲ್ ಬಿಳಿಜೋಳ ಖರೀದಿಸುವುದು. ಬಿಳಿಜೋಳ ಸರಬರಾಜು ಮಾಡಿದ ರೈತರಿಗೆ ಅವರ ಬ್ಯಾಂಕ್ ಖಾತೆಗಳಿಗೆ ಹಣವನ್ನು ಡಿಬಿಟಿ ಮೂಲಕ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಯಪ್ರಕಾಶ್ ಚೌವ್ಹಾಣ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಮಹಮ್ಮದ್ ಅಲಿ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಜಿಲ್ಲಾ ಪ್ರಕಾಶ್ , ಎಪಿಎಮ್‌ಸಿ ಸಹಾಯಕ ನಿರ್ದೇಶಕರಾದ ಕೃಷ್ಣ, ರಾಯಚೂರಿನ ಸಹಕಾರ ಸಂಘಗಳ ಉಪ ನಿಬಂಧಕರಾದ ಮನೋಹರ ಸೇರಿದಂತೆ ಜಿಲ್ಲೆಯ ಲಿಂಗಸುಗೂರು ಸಹಾಯಕ ಆಯುಕ್ತರು ವಿವಿಧ ತಾಲೂಕಿನ ತಹಶೀಲ್ದಾರರು ವಿಸಿಯಲ್ಲಿ ಇದ್ದರು.

## ಕ.ಸೇ.ಕ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷರಾಗಿ ಅನಿತಾ ನವಲಕಲ್ ಆಯ್ಕೆ

ಯುವ ಮಾರ್ಗ ಸುದ್ದಿ

**ಸಿರವಾರ,ಅ.28–** ಕನ್ನಡ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷರಾದ ಕೆ ಆರ್ ಕುಮಾರಣ್ಣ ಬೆಂಗಳೂರಿನ ಕೇಂದ್ರಕಚೇರಿಯಲ್ಲಿ ಉತ್ತರಕ ರ್ನಾಟಕದ ಅಧ್ಯಕ್ಷರಾದ ಚನ್ನಬಸಪ್ಪ ಜೆಕಿನ್ ಹಾಗೂ ಮತ್ತು ರಾಜ್ಯ ಸಲಹೆಗಾರದ ನರಸಿಂಹಲು ಶಿಕ್ಷಕರು ರಾಯಚೂರು, ಇವರ ಮಾರ್ಗದರ್ಶನದ ಮೇರೆಗೆ ಮತ್ತು ರಾಯಚೂರು ಜಿಲ್ಲಾಧ್ಯಕ್ಷರಾದ ಎಂ ಬಸವರಾಜ್ ಮರ್ಕಂದಿನ್ನಿ ನೇತೃತ್ವದಲ್ಲಿ ರಾಜ್ಯಾಧ್ಯಕ್ಷರ ಮುಖಾಂತರ ರಾಯಚೂರು, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರನ್ನಾಗಿ ಅನಿತಾ ನವಲಕಲ್ ಹಾಗೂ ಜಿಲ್ಲಾ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಶ್ರೀಮತಿ ಅಶ್ವಿನಿ ಎಂ ರಾಯಚೂರು ಹಾಗೂ ಜಿಲ್ಲಾ ಮಹಿಳಾ ಘಟಕದ ಕಾರ್ಯಾಧ್ಯಕ್ಷರನ್ನಾಗಿ ನಿವೇದಿತಾ ರಾಯಚೂರು ಇವರನ್ನು ರಾಜ್ಯಾಧ್ಯಕ್ಷರ ಮುಖಾಂತರ ನೇಮಕಾತಿ ಆದೇಶ ಪತ್ರಗಳನ್ನು ಕೇಂದ್ರ ಕಛೇರಿಯಲ್ಲಿ ವಿತರಿಸಿ, ಜಿಲ್ಲಾಮಹಿಳಾ ಘಟಕದ ಪದಾದಿ ಕಾರಿಗಳಿಗೆ ಕನ್ನಡದ ನೆಲ ಜಲ ಭಾಷೆ ಕಲೆ ಸಂಸ್ಕೃತಿ



ಗೌರವಿಸುವುದುತಾಯಿಭುವನೇಶ್ವರಿಯ ಆಶೀರ್ವಾದದಿಂದ ಸಂಘ ಟನೆಯ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಸಂಘಟನೆಯ ಬೆಳೆಸುವಂತಹ ಕೆಲಸವನ್ನು ನಿಷ್ಠೆ ಪ್ರಾಮಾಣಿಕತೆ ದಕ್ಷತೆಯಿಂದ ಕಾರ್ಯ ಪ್ರವೃತ್ತರಾಗಲು ರಾಜ್ಯಾಧ್ಯಕ್ಷರು ಸಲಹೆ ಸೂಚನೆ ನೀಡಿದರು.


# ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸೋಣ : ಅಶೋಕ ಪವಾರ

ಯುವ ಮಾರ್ಗ ಸುದ್ದಿ

**ಸಿರವಾರ,ಅ.28–**ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಎಲ್ಲರೂ ಕೂಡಿ ನಮ್ಮ ಕನ್ನಡದ ಅಭಿಮಾನವನ್ನು ಸಂಭ್ರಮಿಸೋಣ, ಕನ್ನಡಕ್ಕಾಗಿ ದುಡಿದವರನ್ನು ಗೌರವಿಸೋಣ ಎಂದು ತಹಸೀಲ್ದಾರ್ ಹಾಗೂ ತಾಲೂಕ ದಂಡಾಧಿಕಾರಿ ಅಶೋಕ ಪವಾರ ಹೇಳಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಕರೆದಿದ್ದ ಕನ್ನಡ ರಾಜ್ಯೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನವೆಂಬರ್ 1 ರಂದು ಬೆಳಗ್ಗೆ ತಮ್ಮ ತಮ್ಮ ಶಾಲೆ, ಕಛೇರಿಯಲ್ಲಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಹಳೆ ಪ.ಪಂಚಾಯತಿ ಕಟ್ಟಡದಿಂದ ಭುವನೇಶ್ವರಿ ಭಾವಚಿತ್ರ ಮೆರವಣಿಗೆ ಚಾಲನೆ ನೀಡಲಾಗುವುದು ಅಲಿಂದ ಮೆರವಣಿಗೆ ಪ್ರಾರಂಭವಾಗಿ ಮುಖ್ಯರಸ್ತೆಯ ಮೂಲಕ ನೀರಾವರಿ ಇಲಾಖೆಯ ಆವರಣದಲ್ಲಿ ವೇದಿಕೆ ಕಾರ್ಯಕ್ರಮಕ್ಕೆ ಮುಕ್ತಾಯವಾಗುತ್ತದೆ. ಅಲಿ ದ್ವಿವರ್ಣ ಧ್ವಜಾರೋಹಣ ಮಾಡಿ ಗಣ್ಯರ ಹಿತ ನುಡಿಯ, ಸರಕಾರಿ ಕಚೇರಿಗಳನ್ನು ವಿದ್ಯುದ್ದೀಪ ಸೇರಿದಂತೆ ವಿವಿಧ ರೀತಿಯಲ್ಲಿ ಅಲಂಕಾರಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕನ್ನಡ ವಿಷಯದಲ್ಲಿ ಅತ್ಯುತ್ತಮ ಫಲಿತಾಂಶ ನೀಡಿದ ವಿದ್ಯಾರ್ಥಿಗಳನ್ನು, ಶಿಕ್ಷಕರನ್ನು ಇದೇ ಸಂದರ್ಭದಲ್ಲಿ ಗೌರವಿಸಲಾ




ಗುತ್ತದೆ. ಅದರೊಂದಿಗೆ ತಾಲೂಕಿನ ಪ್ರತಿಭಾವಂತರನ್ನು ಹಾಗೂ ಕನ್ನಡಕ್ಕಾಗಿ ಶ್ರಮಿಸಿದವರನ್ನು ಗೌರವಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಶಿಶುಅಭಿವೃದ್ಧಿ ಯೋಜನಾಧಿಕಾರಿ ಗೋಕುಲ್ ಸಾಬ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ಜೆಸ್ಕಾಂ ಎಇಇ ಶಫೀ, ನೀರಾವರಿ ಇಲಾಖೆಯ ಎಇಇ ವಿಜಯಲಕ್ಷ್ಮೀ ಪಾಟೀಲ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಆರೀಫ್ ಮಿಯಾ ಚಾಗಭಾವಿ, ಹಾಗೂ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ವಿವಿಧ ಕನ್ನಡಪರ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಕಸಾಪ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿದಂತೆ ಪಟ್ಟಣದ ಸಾರ್ವಜನಿಕರು ಇದ್ದರು.

## ಅಲ್ಪಸಂಖ್ಯಾತ ಇಲಾಖೆಯಿಂದ ಸರಳ ವಿವಾಹ ಸಹಾಯಧನಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಅ.28–** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50 ಸಾವಿರ ರೂ. ಸಹಾಯಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 222 ರಲ್ಲಿ ಘೋಷಿಸಿರುವಂತೆ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವದರ ಸರಳ ವಿವಾಹಗಳ ವೆಚ್ಚಗಳಿಗಾಗಿ ನೀಡುವ ಕಾರ್ಯಕ್ರಮವನ್ನು ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾದೆ.

**ಷರತ್ತುಗಳು:** ಅರ್ಜಿ ಸಲ್ಲಿಸುವ ವಧು–ವರರು ಕಾರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್,ಜೈನ್,ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದವರಾಗಿರಬೇಕು. ಸಾಮೂಹಿಕ ವಿವಾಹಗಳಲ್ಲಿ ಕನಿಷ್ಠ 05 ಜೋಡಿಗಳು ಭಾಗವಹಿಸಿರತಕ್ಕದ್ದು. ಜಿಲ್ಲಾ ನೋಂದಣಿ/ ವಕ್ಫ್ ಬೋರ್ಡ್ ಕಚೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟಳು, ದೇವಸ್ಥಾನದ ಟ್ರಸ್ಟಳು, ಸಂಘಗಳು, ಸೊಸೈಟಿಗಳು ವಕ್ಫಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45ವರ್ಷ ವಯಸ್ಸು ಆಗಿರತಕ್ಕದ್ದು. ಈ ಯೋಜನೆಯಡಿ ಸಹಾಯಧನ ಪಡೆಯಯಲು ವಧು–ವರರ ವಾರ್ಷಿಕ ಆದಾಯವು 2.50 ಲಕ್ಷರೂ.ಗಳು ಮತ್ತು ಒಟ್ಟಾರೆಯಾಗಿ 5.00 ಲಕ್ಷ ರೂ.ಗಳನ್ನು ಮೀರತಕ್ಕದ್ದಲ್ಲ. ಈ ಸೌಲಭ್ಯವನ್ನು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡತಕ್ಕದ್ದು.

ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ. ಸದರಿ ಸಾಮೂಹಿಕ ವಿವಾಹವು ಇತರೆ ಜಿಲ್ಲೆಗಳಲ್ಲಿ ನಡೆದಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರು ದೃಢೀಕರಿಸುವುದು. ವಧು–ವರರು ಕನಿಷ್ಠ ಎಳು ದಿನ ಮುಂಚಿತವಾಗಿ ವಾಸ್ತವ್ಯವಿರುವ ಜಿಲ್ಲೆಯಲ್ಲಿಯೇ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ನಡೆಸಲಾಗುತ್ತಿದ್ದು, ಅದಾಗ್ಯೂ ಕೆಲವು ಸ್ವಯಂ ಸೇವೆ ಸಂಸ್ಥೆಗಳು ಮತ್ತು ಅರ್ಜಿದಾರರು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಲು ತೊಂದರೆ ಉಂಟಾದಲ್ಲಿ ಅಂತಹ ಸಂದರ್ಭದಲ್ಲಿ ಮಾತ್ರ ಅನುಮೋದಿತ ಆಫ್‌ಲೈನ್ ಅರ್ಜಿ ನಮೂನೆಗಳನ್ನು ಜಿಲ್ಲಾ ಅಥವಾ ತಾಲ್ಲೂಕು ಕಚೇರಿಯಿಂದ ಪಡೆದು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರಗಳಾದ ರಾಯಚೂರು: 9731028420, ದೇವದುರ್ಗ: 9148233616, ಲಿಂಗಸುಗೂರು: 9886447863, ಮಾನವಿ: 887334758 ಹಾಗೂ ಸಿಂಧನೂರು: 8217621732ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಾ ಪ್ರತಿಭೋತ್ಸವಕ್ಕೆ ಹೆಸರು ನೋಂದಣೆಗೆ ಸೂಚನೆ

**ರಾಯಚೂರು,ಅ.28–** ಇಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆ, ಕಲಾ ನೈಪುಣ್ಯ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ರೂಪಿಸಿದೆ. ಈ ಕಾರ್ಯಕ್ರಮವನ್ನು ನಗರದ ಕನ್ನಡ ಭವನದಲ್ಲಿನಡೆಸಲಾಗುವುದು. ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ ಶೀರ್ಷಿಕೆಯಡಿ 3 ವಿಭಾಗಗಳಲ್ಲಿ ಸ್ಪರ್ಧಾ ರೂಪದಲ್ಲಿ ಕಲಾ ಪ್ರತಿಭೋತ್ಸವ ನಡೆಯಲಿದ್ದು, ಆಸಕ್ತರು ಹೆಸರು ನೋಂದಣೆ ಮಾಡಿಕೊಳ್ಳಬಹುದಾಗಿದೆ.

ಬಾಲ ಪ್ರತಿಭೆ: ಬಾಲ ಪ್ರತಿಭೆ ವಿಭಾಗದಲ್ಲಿಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 8ರಿಂದ 14 ವರ್ಷ ವಯಸ್ಸಾಗಿರಬೇಕು.

ಕಿಶೋರ ಪ್ರತಿಭೆ: ಕಿಶೋರ ಪ್ರತಿಭೆ ವಿಭಾಗದಲ್ಲಿಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 14ರಿಂದ 18 ವರ್ಷ ವಯಸ್ಸಾಗಿರಬೇಕು.

**ಯುವ ಪ್ರತಿಭೆ:** ಯುವ ಪ್ರತಿಭೆ ವಿಭಾಗದಲ್ಲಿಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18–30 ವರ್ಷ ವಯಸ್ಸಾಗಿರಬೇಕು. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೆ ಇಲಾಖೆಯಿಂದ ಪ್ರಮಾಣಪತ್ರ ನೀಡಲಾಗುವುದು.

ಈ ಸ್ಪರ್ಧೆಗಳಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಹೆಸರನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ನವಂಬರ್ 5ರೊಳಗಾಗಿ ಸ್ವ–ವಿವರವನ್ನು ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H